ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಭರ್ಜರಿ ಜಯ ಸಾಧಿಸಿದ ನಂತರ ಪ್ರಧಾನಿ ಮೋದಿ ಅವರು ಸಂಭ್ರಮಿಸಿದ ಕ್ಷಣ...

15 ನವೆಂಬರ್ 2025 ಶನಿವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 245 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ತನ್ನ ಬದುಕನ್ನೇ ಪರಿಸರಕ್ಕೆ ಮುಡಿಪಿಟ್ಟ ಮಹಾತಾಯಿ » 2



ಮೇಕೆದಾಟು : ಸುಪ್ರೀಂ ತೀರ್ಪಿಗೆ ಸಂಭ್ರಮ » 3



ವೃಕ್ಷಮಾತೆಗೆ ಜಿಲ್ಲಾಡಳಿತದಿಂದ ಗೌರವ ಸಮರ್ಪಣೆ » 4

# ಬಿಹಾರದಲ್ಲಿ ಎನ್‌ಡಿಎಗೆ ಪ್ರಚಂಡ ಗೆಲುವು

## ಮಹಾಘಟ ಬಂಧನ್ ಧೂಳಿಪಟ | ಅತೀ ದೊಡ್ಡ ಪಕ್ಷವಾಗಿ ಹೊರಹೊಮ್ಮಿದ ಬಿಜೆಪಿ, ಕಾಂಗ್ರೆಸ್‌ಗೆ ಹೀನಾಯ ಸೋಲು

• ಪ್ರಜೋದಯ ವರದಿ

**ನವದೆಹಲಿ:** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಪ್ರಚಂಡ ಬಹುಮತ ಸಾಧಿಸಿದೆ. 243 ಸ್ಥಾನಗಳಲ್ಲಿ 202 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಬಿಜೆಪಿ 90 ಸ್ಥಾನಗಳಲ್ಲಿ ಜಯಗಳಿಸಿ ಅತೀ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ.

ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ), ಕಾಂಗ್ರೆಸ್ ಮತ್ತು ಮೂರು ಎಡ ಪಕ್ಷಗಳನ್ನು ಒಳಗೊಂಡಿರುವ ಮಹಾಘಟಬಂಧನ್ ತನ್ನ ಮುಖ್ಯಮಂತ್ರಿ ಅಭ್ಯರ್ಥಿಯಾಗಿ ತೇಜಸ್ವಿ ಯಾದವ್ ಅವರನ್ನು ಬಿಂಬಿಸಿದ್ದರೂ ಸೋಲು ಅನುಭವಿಸಿದೆ. ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟವು 35 ಸ್ಥಾನಕ್ಕೆ ತೃಪ್ತಿಪಟ್ಟಿಕೊಳ್ಳಬೇಕಾಗಿದೆ. ಇತರರು 6 ಮಂದಿ ಗೆಲುವು ದಾಖಲಿಸಿದ್ದಾರೆ.

ಬಿಜೆಪಿ ಸ್ಪರ್ಧಿಸಿದ 101 ವಿಧಾನಸಭಾ ಸ್ಥಾನಗಳಲ್ಲಿ 90 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಮುಖ್ಯಮಂತ್ರಿ ನಿತೀಶ್ ಕುಮಾರ್‌ಗೆ ಮೋದಿ ಮತ್ತು ಅವರ ಸಚಿವರು ನೀಡಿದ ದೃಢ ಬೆಂಬಲವು ಜೆಡಿಯುಗೆ ಉತ್ತಮ ಲಾಭಾಂಶವನ್ನು ನೀಡಿದೆ. 2020ರಲ್ಲಿ ಕೇವಲ 43 ಸ್ಥಾನಗಳನ್ನು ಗೆದ್ದಿದ್ದ ಜೆಡಿಯು ಈಗ 83 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಇನ್ನು ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ನೇತೃತ್ವದ ಲೋಕ ಜನಶಕ್ತಿ ಪಕ್ಷ-ರಾಮ್ ವಿಲಾಸ್ ಪಕ್ಷವು 28 ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದು 19 ಕ್ಷೇತ್ರಗಳಲ್ಲಿ ಜಯಗಳಿಸಿದೆ.

### ಒಟ್ಟು ಸ್ಥಾನ-243 : ಸರ್ಕಾರ ರಚಿಸಲು ಬೇಕಿರುವ ಸ್ಥಾನ-122

### 10ನೇ ಬಾರಿಗೆ ನಿತೀಶ್ ಕುಮಾರ್ ಸಿಎಂ

ಎನ್‌ಡಿಎ ಮೈತ್ರಿಕೂಟದ ಮುಖ್ಯಮಂತ್ರಿ ಅಭ್ಯರ್ಥಿಯಾಗಿದ್ದ ನಿತೀಶ್ ಕುಮಾರ್ ಅವರು ಸತತ 10ನೇ ಬಾರಿ ಸಿಎಂ ಆಗಿ ಪ್ರಮಾಣ ವಚನ ಸ್ವೀಕರಿಸುವ ಮೂಲಕ ಅವರು ಹೊಸತೊಂದು ದಾಖಲೆ ಬರೆಯಲಿದ್ದಾರೆ. ಸತತವಾಗಿ 20 ವರ್ಷ ಮುಖ್ಯಮಂತ್ರಿ ಆಗಿರುವ ನಿತೀಶ್ ಕುಮಾರ್, ಸತತ ಸೋಲುಗಳಿಂದಲೇ ರಾಜಕೀಯ ಜೀವನ ಆರಂಭಿಸಿದ್ದರು. ಅಷ್ಟೇ ಅಲ್ಲ, ಸತತ ಸೋಲಿನಿಂದ ಕಂಗೆಟ್ಟು ರಾಜಕೀಯ ಬೇಡವೇ ಎಂಬ ನಿರ್ಧಾರಕ್ಕೂ ಬಂದಿದ್ದರು. ಆದರೆ, ವಿಧಿಯು ಅವರನ್ನು ಮತ್ತೆ ರಾಜಕೀಯ ಜೀವನದಲ್ಲಿ ಮುಂದುವರಿಯುವಂತೆ ಮಾಡಿ, ಈಗ ಮತ್ತೆ ಬಿಹಾರದ ಮುಖ್ಯಮಂತ್ರಿಯಾಗಲಿದ್ದಾರೆ.



| 2025ರ ಫಲಿತಾಂಶ | |
|---|---|
| ಮೈತ್ರಿಕೂಟ | ಸ್ಥಾನ |
| ಎನ್‌ಡಿಎ | 202 |
| ಎಂಜಿಬಿ | 35 |
| ಇತರೆ | 06 |

| 2020ರ ಫಲಿತಾಂಶ | |
|---|---|
| ಮೈತ್ರಿಕೂಟ | ಸ್ಥಾನ |
| ಎನ್‌ಡಿಎ | 125 |
| ಎಂಜಿಬಿ | 110 |
| ಇತರೆ | 08 |

### ಮೈಥಿಲಿ ಠಾಕೂರ್ ಕಿರಿಯ ಶಾಸಕಿ

ಕೆಲವು ತಿಂಗಳುಗಳ ಹಿಂದೆ ಬಿಜೆಪಿಗೆ ಸೇರಿದ್ದ ಗಾಯಕಿ ಮೈಥಿಲಿ ಠಾಕೂರ್ ಇದೀಗ 12,000 ಮತಗಳ ಅಂತರದಿಂದ ಗೆಲುವು ಸಾಧಿಸುವ ಮೂಲಕ ರಾಜ್ಯದ ಕಿರಿಯ ಶಾಸಕಿಯಾಗಿ ಹೊರಹೊಮ್ಮಿದ್ದಾರೆ. ಬಿಹಾರದ ದರ್ಭಾಂಗನ ಅಲಿಗರ್ ಕ್ಷೇತ್ರದಿಂದ ಸ್ಪರ್ಧಿಸಿದ್ದ 25ರ ಹರೆಯದ ಮೈಥಿಲಿ ಠಾಕೂರ್, ಆರ್‌ಜೆಡಿ ಅಭ್ಯರ್ಥಿ ಬಿನೋದ್ ಮಿಶ್ರಾ ವಿರುದ್ಧ ಗೆಲುವು ಸಾಧಿಸಿದ್ದಾರೆ.

### ಕಳಪೆ ಪ್ರದರ್ಶನ ತೋರಿದ ಕಾಂಗ್ರೆಸ್

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಮತಗಳ್ಳತನ ಪ್ರಚಾರ ತಂತ್ರ ಫಲ ನೀಡಿಲ್ಲ. ಬದಲಾಗಿ ಕಾಂಗ್ರೆಸ್ ಈ ಬಾರಿಯೂ ಹೀನಾಯ ಸೋಲು ಅನುಭವಿಸಿದ್ದು, ಇದು ಬಿಹಾರದ ರಾಜಕೀಯದಲ್ಲಿ ಕಾಂಗ್ರೆಸ್ ಪಕ್ಷವು ಇತ್ತೀಚಿನ ವರ್ಷಗಳಲ್ಲಿ ತೋರಿದ ಅತ್ಯಂತ ಕಳಪೆ ಪ್ರದರ್ಶನ ಎನಿಸಿಕೊಂಡಿದೆ. ಕಾಂಗ್ರೆಸ್ ಕೇವಲ 6 ಸ್ಥಾನ ಗಳಲ್ಲಿ ಮಾತ್ರ ಗೆಲುವು ಸಾಧಿಸಿದೆ. 2020ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 19 ಸ್ಥಾನಗಳನ್ನು ಗೆದ್ದಿತ್ತು. ಮೈತ್ರಿ ಪಕ್ಷವಾದ ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ಉತ್ತಮ ಪ್ರದರ್ಶನ ನೀಡಿ ಮಹಾಘಟಬಂಧನ್‌ನ ಪ್ರಬಲ ಸ್ತಂಭವಾಗಿ ಹೊರಹೊಮ್ಮುತ್ತಿರುವ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಪ್ರದರ್ಶನ ನಿರಾಶಾದಾಯಕವಾಗಿದೆ.

### ಕ್ಷೇತ್ರ ಉಳಿಸಿಕೊಂಡ ತೇಜಸ್ವಿ ಯಾದವ್

ಇಂಡಿಯಾ ಒಕ್ಕೂಟದ ಮುಖ್ಯಮಂತ್ರಿ ಅಭ್ಯರ್ಥಿ ಆರ್‌ಜೆಡಿಯ ತೇಜಸ್ವಿ ಯಾದವ್ ಗೆಲುವು ಸಾಧಿಸುವ ಮೂಲಕ ಕ್ಷೇತ್ರವನ್ನು ಉಳಿಸಿಕೊಂಡಿದ್ದಾರೆ. ರಾಘೋಪುರ ಕ್ಷೇತ್ರದಲ್ಲಿ ಕಣಕ್ಕಿಳಿದಿದ್ದ ತೇಜಸ್ವಿ, ಎದುರಾಳಿ ಬಿಜೆಪಿ ಅಭ್ಯರ್ಥಿ ಸತೀಶ್ ಕುಮಾರ್ ವಿರುದ್ಧ 14,532 ಮತಗಳ ಅಂತರದಲ್ಲಿ ಗೆಲುವು ಸಾಧಿಸಿದ್ದಾರೆ. ತೇಜಸ್ವಿ ಒಟ್ಟು 1,18,597 ಮತಗಳನ್ನು ಪಡೆದಿದ್ದಾರೆ. ಸತೀಶ್ ಕುಮಾರ್ 1,04,065 ಮತಗಳನ್ನು ಪಡೆದಿದ್ದಾರೆ. ಸ್ವತಂತ್ರ ಅಭ್ಯರ್ಥಿ ಬಲಿರಾಮ್ ಸಿಂಗ್ 3,086 ಮತಗಳನ್ನು ಗಳಿಸಿದ್ದಾರೆ. ತೇಜಸ್ವಿ ಯಾದವ್ ಕಳೆದ 10 ವರ್ಷಗಳಿಂದ ರಾಘೋಪುರ ಸ್ಥಾನವನ್ನು ಹೊಂದಿದ್ದಾರೆ. 2015 ಮತ್ತು 2020 ರ ವಿಧಾನಸಭಾ ಚುನಾವಣೆಯಲ್ಲಿ ಸತೀಶ್ ಕುಮಾರ್ ಅವರನ್ನು ಸೋಲಿಸಿದ್ದರು.

# ವೃಕ್ಷಮಾತೆ ತಿಮ್ಮಕ್ಕ ಅಸ್ತಂಗತ

- ಬೇಲೂರಿನಲ್ಲಿಂದು ಸಾರ್ವಜನಿಕ ದರ್ಶನ
- ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದ ತಿಮ್ಮಕ್ಕ



• ಪ್ರಜೋದಯ ವರದಿ

**ಹಾಸನ:** ಪದ್ಮಶ್ರೀ ಪುರಸ್ಕೃತ ವೃಕ್ಷ ಮಾತೆ, ಶತಾಯುಷಿ ಸಾಲುಮರದ ತಿಮ್ಮಕ್ಕ (114) ಅವರು ವಯೋಸಹಜ ಕಾಯಿಲೆಯಿಂದ ಶುಕ್ರವಾರ ಬೆಂಗಳೂರಿನ ಜಯನಗರದಲ್ಲಿರುವ ಅಪೋಲೊ ಆಸ್ಪತ್ರೆಯಲ್ಲಿ ನಿಧನರಾದರು.

ಬೆಂಗಳೂರಿನಲ್ಲಿ ಸಾಕು ಮಗ ಉಮೇಶ್ ಬಳ್ಳೂರು ಜೊತೆಗೆ ನೆಲೆಸಿದ್ದ ಸಾಲುಮರದ ತಿಮ್ಮಕ್ಕ ಅವರ ಆರೋಗ್ಯದಲ್ಲಿ ಏರುಪೇರಾದ ಹಿನ್ನಲೆಯಲ್ಲಿ ಎರಡು ದಿನಗಳ ಹಿಂದೆ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಉಸಿರಾಟ ಸಮಸ್ಯೆಯಿಂದ ಬಳಲುತ್ತಿದ್ದರು. ಹಸಿರು ಉಳಿಸಿದ ಮೇರು ವ್ಯಕ್ತಿತ್ವವೊಂದು ಉಸಿರು ನಿಲ್ಲಿಸಿದೆ.

### ನೋವು ಮರೆಯಲು ಗಿಡ ನೆಟ್ಟರು

ತುಮಕೂರು ಜಿಲ್ಲೆ ಗುಬ್ಬಿ ತಾಲ್ಲೂಕು ಹೊಸೂರು ಗ್ರಾಮದಲ್ಲಿ 1911ರ ಜೂ.30 ರಂದು ಜನಿಸಿದ ತಿಮ್ಮಕ್ಕ ಅವರ ಬಾಲ್ಯ ತೀರಾ ಕಷ್ಟಕರವಾಗಿತ್ತು. ಕೂಲಿ ಕೆಲಸ ಮಾಡುತ್ತಲೇ ಬೆಳೆದ ತಿಮ್ಮಕ್ಕ ಶಾಲೆಯ ಮುಖ ನೋಡಿದವರಲ್ಲ. 15 ವಯಸ್ಸಿನಲ್ಲಿ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ ವಿಷ ಸರ್ಪ ಕಚ್ಚಿ ಸಾವಿನ ದವಡೆಯಿಂದ ಪಾರಾದರು. 19ನೇ ವಯಸ್ಸಿಗೆ ಬೆಂಗಳೂರು ದಕ್ಷಿಣ ಕನ್ನಡ ಜಿಲ್ಲೆ ಹುಲಿಕಲ್ ಗ್ರಾಮದ ಚಿಕ್ಕಯ್ಯ ಎಂಬುವವರನ್ನು ವಿವಾಹವಾಗಿ ದಾಂಪತ್ಯ ಜೀವನ ಪ್ರಾರಂಭಿಸಿದರು. ದಂಪತಿಗಳಿಬ್ಬರು ಗ್ರಾಮ ಸಮೀಪದ ಕಲ್ಲು ಗಣಿಗಾರಿಕೆಯಲ್ಲಿ ಕೂಲಿ ಕಾರ್ಮಿಕರಾಗಿ ಕೆಲಸ ಮಾಡಿಕೊಂಡಿದ್ದರು.

ಮದುವೆಯಾಗಿ 25 ವರ್ಷ ಕಳೆದರೂ ತಿಮ್ಮಕ್ಕ ಮತ್ತು ಚಿಕ್ಕಯ್ಯ ದಂಪತಿಗೆ ಮಕ್ಕಳಿರಲಿಲ್ಲ. ಆ ಕೊರಗು ಮರೆಯಲು ತಿಮ್ಮಕ್ಕ ಅವರು ತಮ್ಮೂರಿನ ರಸ್ತೆ ಬದಿ ಗಿಡಗಳನ್ನು ನೆಟ್ಟರು. ಅವುಗಳನ್ನೇ ತಮ್ಮ ಮಕ್ಕಳೆಂದು ನಿತ್ಯ ನೀರು ಹಾಕಿ, ದನಕರುಗಳು ತಿನ್ನದಂತೆ ನೋಡಿಕೊಂಡು ಪೋಷಿಸಿದರು. ಆ ಗಿಡಗಳೀಗ ದೊಡ್ಡ ಮರಗಳಾಗಿ ಬೆಳೆದು ನಿಂತಿವೆ. ಗಿಡಗಳನ್ನು ಮಕ್ಕಳಂತೆ ಕಂಡು ಪೋಷಿಸಿ ಬೆಳೆಸಿದ್ದ ತಿಮ್ಮಕ್ಕ ಅವರ ಸಾಧನೆಗೆ 2019ರಲ್ಲಿ ಭಾರತ ಸರ್ಕಾರದ ಅತ್ಯುನ್ನತ ಪ್ರಶಸ್ತಿಗಳಲ್ಲಿ ಒಂದಾದ ಪದ್ಮಶ್ರೀ ಸೇರಿ ಅಂತರಾಷ್ಟ್ರೀಯ, ರಾಷ್ಟ್ರೀಯ ಹಾಗು ರಾಜ್ಯ ಮಟ್ಟದ ಹಲವು ಪ್ರಶಸ್ತಿಗಳು, ಪುರಸ್ಕಾರಗಳು ಹಾಗು ಬಿರುದುಗಳು ಅರಸಿ ಬಂದಿವೆ.

### ತಿಮ್ಮಕ್ಕಗೆ ಸಂದ ಪ್ರಶಸ್ತಿಗಳು

ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರಿಗೆ ರಾಜ್ಯ ಹಾಗು ರಾಷ್ಟ್ರೀಯ ಮಟ್ಟದ ಅನೇಕ ಪ್ರಶಸ್ತಿಗಳು ಲಭಿಸಿವೆ. ರಾಷ್ಟ್ರೀಯ ಪೌರ ಪ್ರಶಸ್ತಿ (1995), ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ (1997), ವೀರಚಕ್ರ ಪ್ರಶಸ್ತಿ (1997), ಮಹಿಳಾ ಮತ್ತು ಶಿಶು ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ) ಮಾನ್ಯತೆ ಪಡೆದ ಪ್ರಮಾಣ ಪತ್ರ, ಭಾರತೀಯ ವೃಕ್ಷ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆ ಶ್ಲಾಘನೆಯ ಪ್ರಮಾಣ ಪತ್ರ, ಕರ್ನಾಟಕ ಕಲ್ಪವಲ್ಲಿ ಪ್ರಶಸ್ತಿ (2000), ರಾಜ್ಯೋತ್ಸವ ಪ್ರಶಸ್ತಿ, ಪದ್ಮಶ್ರೀ ಪ್ರಶಸ್ತಿ (2019), ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಸೇರಿ ಅನೇಕ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

### ಬಳ್ಳೂರು ಉಮೇಶ್ ಸಾಕು ಮಗ

ಸಾಲುಮರದ ತಿಮ್ಮಕ್ಕ ಅವರ ಪರಿಸರ ಪ್ರಿಯ ಕೆಲಸಗಳ ವರದಿಯನ್ನು ಪತ್ರಿಕೆಯಲ್ಲಿ ಓದಿದ ಬೇಲೂರು ತಾಲ್ಲೂಕು ಬಳ್ಳೂರು ಗ್ರಾಮದ ಉಮೇಶ್ 2004ರ ಸಮಯದಲ್ಲಿ ತಿಮ್ಮಕ್ಕ ಅವರನ್ನು ಹುಡುಕಿ ಹುಲಿಕಲ್‌ಗೆ ತೆರಳಿದ್ದರು. ನಂತರ ಸಮಯ ಸಿಕ್ಕಾಗಲೆಲ್ಲಾ ಅವರನ್ನು ಭೇಟಿಯಾಗಿ ಕುಶಲೋಪರಿ ವಿಚಾರಿಸುತ್ತಾ ಹತ್ತಿರವಾದರು. ಒಡಹುಟ್ಟಿದವರು ಯಾರೂ ಇಲ್ಲದ ಹಿನ್ನಲೆಯಲ್ಲಿ ತಿಮ್ಮಕ್ಕ ಅವರ ಬದುಕು ದಯನೀಯವಾಗಿತ್ತು. ಹೀಗಾಗಿ 2007ರಲ್ಲಿ ಉಮೇಶ್ ಅವರನ್ನೇ ತಿಮ್ಮಕ್ಕ ದತ್ತು ಪಡೆದರು. ಬಳಿಕ ಬಳ್ಳೂರು ಹಾಗು ಬೆಂಗಳೂರಿನಲ್ಲಿ ಸಾಕು ಮಗನ ಜೊತೆ ಇದ್ದರು.

ನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಅಭಿಮಾನಿಗಳಿಗೆ ಶುಕ್ರವಾರ ರಾತ್ರಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಶನಿವಾರ ಬೇಲೂರಿನ ಜೂನಿಯರ್ ಕಾಲೇಜು ಆವರಣದಲ್ಲಿ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಶುಕ್ರವಾರ ಸಂಜೆ 6 ಗಂಟೆಗೆ ಹುಲಿಕಲ್ ಗ್ರಾಮದಲ್ಲಿ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾ ಗಿತ್ತು. ಸಾಲು ಮರದ ತಿಮ್ಮಕ್ಕ ಅವರ ನಿಧನಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಂಸದ ಶ್ರೇಯಸ್ ಪಟೇಲ್, ಜಿಲ್ಲಾ ಪತ್ರಕರ್ತರ ಸಂಘ ಸೇರಿ ಅನೇಕ ಸಂಘ-ಸಂಸ್ಥೆಗಳು ಸಂತಾಪ ಸೂಚಿಸಿವೆ.

### ಮಾಜಿ ಪ್ರಧಾನಿ ಹೆಚ್.ಡಿ.ಡಿ. ಸಂತಾಪ



ಹಾಸನ: ವೃಕ್ಷಮಾತೆ, ಶತಾಯುಷಿ ಸಾಲುಮರದ ತಿಮ್ಮಕ್ಕ ಅವರ ನಿಧನಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ನಿಧನರಾದರೆಂಬ ಸುದ್ದಿ ಕೇಳಿ ಆಘಾತವಾಯಿತು. ಮರಗಳೇ ಮಕ್ಕಳು ಎಂದು ಭಾವಿಸಿದ್ದ ತಿಮ್ಮಕ್ಕ ನೂರಾರು ಮರಗಳನ್ನು ಸಾಕಿ ಸಲಹಿದ ಮಹಾತಾಯಿ ಆಗಿದ್ದರು. ಆ ಮೂಲಕ ಪರಿಸರ ಉಳಿಸಿಮ ಬೆಳೆಸಲು ಎಲ್ಲರಿಗೂ ಮಾದರಿಯಾಗಿದ್ದರೆಂದರು.

ಇಳಿವಯಸ್ಸಿನಲ್ಲೂ ಸದಾ ಹಸನ್ಮುಖಿಯಾಗಿದ್ದ ತಿಮ್ಮಕ್ಕ ಅವರ ನಿಧನ ಅತೀವ ನೋವು ತಂದಿದೆ. ನಮ್ಮ ನಾಡಿನ ಒಬ್ಬ ಅಪ್ಪಟ ಪರಿಸರವಾದಿಯಾಗಿದ್ದ ಅವರು ಗಂಡನ ಬೆಂಬಲದಿಂದ ಕುದೂರು ಮತ್ತು ಹುಲಿಕಲ್ ನಡುವಿನ ಸುಮಾರು 4.5 ಕಿ.ಮೀ. ಉದ್ದದ ರಸ್ತೆಯ ಬದಿಯಲ್ಲಿ 385 ಆಲದ ಮರಗಳನ್ನು ನೆಟ್ಟು ಪೋಷಿಸಿದರು. ಪರಿಸರ ಸಂರಕ್ಷಣೆಯಲ್ಲಿ ಮಹತ್ತರ ಕಾರ್ಯ ಮಾಡಿದ್ದ ಅವರ ಸಾಧನೆ ಗುರುತಿಸಿ ನಮ್ಮ ದೇಶದ ಪದ್ಮಶ್ರೀ ಗೌರವ ಸೇರಿ ಹಲವಾರು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಂಸ್ಥೆಗಳು ಗಮನಿಸಿ ಪುರಸ್ಕರಿಸಿವೆ ಎಂದಿದ್ದಾರೆ.

## ಕರ್ನಾಟಕದಲ್ಲೂ ಬಿಹಾರ ಫಲಿತಾಂಶ ಮರುಕಳಿಸಲಿದೆ

• ಪ್ರಜೋದಯ ವರದಿ

**ನವದೆಹಲಿ:** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಮೈತ್ರಿಕೂಟ ಭರ್ಜರಿ ಮುನ್ನಡೆ ಸಾಧಿಸಿದ್ದರೆ, ಮಹಾಘಟಬಂಧನ್ ನೆಲಕ್ಕಚ್ಚಿದೆ. ಕಾಂಗ್ರೆಸ್-ಆರ್‌ಜೆಡಿ ಮೈತ್ರಿಕೂಟಕ್ಕೆ ತೀವ್ರ ಹಿನ್ನಡೆಯಾಗಿದ್ದು, ಕರ್ನಾಟಕದಲ್ಲಿಯೂ ಮುಂದೆ ಇದೇ ರೀತಿ ಫಲಿತಾಂಶ ಹೊರಬೀಳಲಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹೇಳಿದ್ದಾರೆ.

## ಬಂದೂಕು ಹಿಡಿದ ಸರ್ಕಾರ ಅಧಿಕಾರಕ್ಕೆ ಬರಲ್ಲ : ಮೋದಿ

• ಪ್ರಜೋದಯ ವರದಿ

**ನವದೆಹಲಿ:** ಬಿಹಾರದಲ್ಲಿ ಕಟ್ಟಾ ಸರ್ಕಾರ್ (ಬಂದೂಕು ಹಿಡಿದ ಸರ್ಕಾರ) ಇನ್ನೆಂದಿಗೂ ಅಧಿಕಾರಕ್ಕೆ ಬರುವುದಿಲ್ಲವೆಂದು ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದರು.

ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಎನ್‌ಡಿಎ ಭರ್ಜರಿ ಜಯಗಳಿಸಿದ ಹಿನ್ನಲೆಯಲ್ಲಿ ದೆಹಲಿಯ ಬಿಜೆಪಿ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ವಿಜಯೋತ್ಸವದಲ್ಲಿ ಮಾತನಾಡಿದ ಅವರು, ನಾನು ಚುನಾವಣೆ ವೇಳೆ ಜಂಗಲ್ ರಾಜ್ ಮತ್ತು ಕಟ್ಟಾ ಸರ್ಕಾರ್ ಬಗ್ಗೆ ಮಾತನಾಡಿದಾಗೆಲ್ಲಾ ಆರ್‌ಜೆಡಿಯಿಂದ ಯಾವ ವಿರೋಧ ಕೇಳಿ ಬರುತ್ತಿರಲಿಲ್ಲ. ಕಾಂಗ್ರೆಸ್‌ಗೆ ಮಾತ್ರ ನೋವುಂಟಾಗಿತ್ತು ಎಂದರು.

ನಾವು ಜನರ ಸೇವಕರು, ನಮ್ಮ ಕಠಿಣ ಪರಿಶ್ರಮದಿಂದ ಜನರನ್ನು ಸಂತೋಷ ಪಡಿಸುತ್ತಲೇ ಇರುತ್ತೇವೆ. ಲಕ್ಷಾಂತರ ಜನರ ಹೃದಯ ಗೆದ್ದಿದ್ದೇವೆ. ಅದಕ್ಕಾಗಿಯೇ ಇಡೀ ಬಿಹಾರ ಫಿರ್ ಏಕ್ ಬಾರ್ ಎನ್‌ಡಿಎ ಸರ್ಕಾರ್ (ಮತ್ತೊಮ್ಮೆ ಎನ್‌ಡಿಎ ಸರ್ಕಾರ) ಎಂದಿದೆ. ಎನ್‌ಡಿಎಗೆ ಪ್ರಚಂಡ ಗೆಲುವು ನೀಡಬೇಕೆಂದು ಬಿಹಾರದ ಜನರನ್ನು ಕೇಳಿಕೊಂಡಿದ್ದೆ, ನನ್ನ ಒಂದು ಕೂಗಿಗೆ ಅವರು ಕಿವಿಗೊಟ್ಟಿದ್ದಾರೆ. 2010 ರಿಂದ ಈಚೆಗೆ ಮೈತ್ರಿಕೂಟಕ್ಕೆ ಅತಿದೊಡ್ಡ ಅಂತರದ ಗೆಲುವು ನೀಡಿದ್ದಾರೆ. ಅದಕ್ಕಾಗಿ ಇಡೀ ಎನ್‌ಡಿಎ ಕುಟುಂಬದ ಪರವಾಗಿ ಬಿಹಾರದ ಜನರಿಗೆ ಧನ್ಯವಾದ ಅರ್ಪಿಸುತ್ತೇನೆ.



ಈ ಚುನಾವಣೆಯು ಭಾರತೀಯ ಚುನಾವಣಾ ಆಯೋಗದ ಮೇಲಿನ ಸಾರ್ವಜನಿಕರ ನಂಬಿಕೆಯನ್ನು ಮತ್ತಷ್ಟು ಬಲಪಡಿಸಿದೆ. ಕೆಲವು ವರ್ಷಗಳಿಂದ ನಿರಂತರವಾಗಿ ಮತದಾನದ ಪ್ರಮಾಣ ಹೆಚ್ಚಾಗಿದೆ. ಅವಕಾಶ ವಂಚಿತರು, ಶೋಷಿತರಿಂದಲೂ ಮತದಾನ ಪ್ರಮಾಣ ಹೆಚ್ಚಾಗಿರುವುದು ಚುನಾವಣಾ ಆಯೋಗದ ಗಮನಾರ್ಹ ಸಾಧನೆಯಾಗಿದೆ ಎಂದು ಮೋದಿ ಆಯೋಗದ ಕಾರ್ಯಕ್ಕೆ ಮೆಚ್ಚುಗೆ ಸೂಚಿಸಿದರು.





## ಬಿಹಾರದ ಜನರ ತೀರ್ಪು ಒಪ್ಪಿಕೊಳ್ಳಬೇಕು : ಸಿ.ಎಂ.

• ಪ್ರಜೋದಯ ವರದಿ

**ಬೆಂಗಳೂರು :** ಬಿಹಾರದ ಜನರ ತೀರ್ಪನ್ನು ಒಪ್ಪಿಕೊಳ್ಳಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಕ್ರಿಯಿಸಿದರು.

ಸುದ್ದಿಗಾರರ ಜೊತೆ ಶುಕ್ರವಾರ ಮಾತನಾಡಿ, ಮಹಾ ಘಟಬಂಧನ್‌ಗೆ ಏಕೆ ಮತ ಹಾಕಿಲ್ಲ. ಇಂಡಿಯಾ ಮೈತ್ರಿಕೂಟಕ್ಕೆ ಏಕೆ ಹಿನ್ನಡೆಯಾಯಿತು ಗೊತ್ತಿಲ್ಲ. ಏನೇ ಆದರೂ ಜನರ ತೀರ್ಪನ್ನು ಒಪ್ಪಿಕೊಳ್ಳಬೇಕು. ನಾನು ಬಿಹಾರಕ್ಕೆ ಈ ಬಾರಿ ಚುನಾವಣಾ ಪ್ರಚಾರಕ್ಕೆ ಹೋಗಿರಲಿಲ್ಲ. ಎನ್‌ಡಿಎ ಏಕೆ ದೊಡ್ಡ ಬಹುಮತದಿಂದ ಗೆಲುವು ಸಾಧಿಸಿದೆ ಎನ್ನುವ ಕುರಿತು ಮಾಹಿತಿ ತಿಳಿದುಕೊಳ್ಳಲು ಪ್ರಯತ್ನಿಸುತ್ತೇನೆಂದು ಹೇಳಿದರು.

ಅಷ್ಟು ದೊಡ್ಡ ಸಂಖ್ಯೆಯಲ್ಲಿ ಗೆಲುವು ಸಾಧಿಸಿದ್ದು ನೋಡಿದರೆ ಮತ ಕಳವು ಶಂಕೆ ಇದೆ. ಅಲ್ಲಿನ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಡೆದ ಬಳಿಕವಷ್ಟೇ ಪ್ರತಿಕ್ರಿಯೆ ನೀಡುವೆ ಎಂದಷ್ಟೇ ಹೇಳಿದರು. ಅಹಿಂದ ಸಮುದಾಯದವರು ಕೈ ಹಿಡಿಯಲಿಲ್ಲವಲ್ಲ ಎಂಬ ಪ್ರಶ್ನೆಗೆ, ಮುಖ್ಯಮಂತ್ರಿ ನಿತೀಶ್ ಕುಮಾರ್ ಹಿಂದುಳಿದವರು ಅಲ್ಲವೇ ಎಂದರು.



# ಮೇಕೆದಾಟು: ಸುಪ್ರೀಂ ತೀರ್ಪಿಗೆ ಸಂಭ್ರಮ

## ಅರಸೀಕೆರೆಯಲ್ಲಿ ಶಾಸಕ ಕೆ.ಎಂ.ಶಿ. ನೇತೃತ್ವದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿದ ಕಾಂಗ್ರೆಸ್ ಕಾರ್ಯಕರ್ತರು

• ಪ್ರಜೋದಯ ವರದಿ

**ಅರಸೀಕೆರೆ:** ಮೇಕೆದಾಟು ಅಣೆಕಟ್ಟು ವಿರುದ್ಧ ತಮಿಳುನಾಡು ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾ ಮಾಡಿರುವುದನ್ನು ತಾಲ್ಲೂಕಿನ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಸ್ವಾಗತಿಸುವ ಮೂಲಕ ಭರ್ಜರಿ ಸಂಭ್ರಮ ವ್ಯಕ್ತಪಡಿಸಿದರು.



ರಾಜ್ಯ ಗೃಹ ನಿರ್ಮಾಣ ಮಂಡಳಿಯ ಅಧ್ಯಕ್ಷರು ಆದ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರ ನೇತೃತ್ವದಲ್ಲಿ ನಗರದ ಪಿಪಿ ವೃತ್ತದಲ್ಲಿ ಸೇರಿದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ತಿನಿಸುವ ಮೂಲಕ ಪರಸ್ಪರ ಸಂತಸ ಹಂಚಿಕೊಂಡರು.

ಈ ಸಂದರ್ಭದಲ್ಲಿ ಶಾಸಕ ಶಿವಲಿಂಗೇಗೌಡ ಅವರು ಮಾತನಾಡಿ, ನ್ಯಾಯಸಮ್ಮತವಾಗಿ ನಮ್ಮ ಪಾಲಿನ ನೀರನ್ನು ನಾವು ಬಳಸಿಕೊಳ್ಳಲು ವಿನಾಕಾರಣ ನೆರೆಯ ತಮಿಳುನಾಡು ಸರ್ಕಾರ ಅಡ್ಡಿಪಡಿಸುತ್ತಾ ಬಂದಿತ್ತಲ್ಲದೆ ಈ ಸಂಬಂಧ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿಯನ್ನು ಸಹ ಸಲ್ಲಿಸಿತ್ತು. ಸುದೀರ್ಘ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ರಾಜ್ಯದ ಪರ ತೀರ್ಪು ನೀಡಿರುವುದು ಸಂತಸದ ವಿಷಯವಾಗಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು.

ಮೇಕೆದಾಟು ಯೋಜನೆ ಬೆಂಗಳೂರಿನ ಜನತೆಗೆ ವರದಾನವಾಗಿದೆ. ಅಂದುಕೊಂಡಂತೆ ಈ ಯೋಜನೆ ಅನುಷ್ಠಾನಗೊಂಡಿದೆ ಆದರೆ ರಾಜಧಾನಿ ಬೆಂಗಳೂರಿನಲ್ಲಿ ವಾಸಿಸುತ್ತಿರುವ ಕೋಟ್ಯಾಂತರ ಜನತೆಯ ನೀರಿನ ದಾಹ ತಣಿಸಲಿದೆ. ಹಾಗಾಗಿ ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಬದ್ಧವಾಗಿದ್ದು ಶೀಘ್ರದಲ್ಲೇ ಕಾಮಗಾರಿಗೆ ಚಾಲನೆ ದೊರೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಆಗ್ರಹ:** ಅದೇ ರೀತಿ ಅಪ್ಪರ್ ಭದ್ರ ಯೋಜನೆಯ ಅನುಷ್ಠಾನಕ್ಕೆ ಕಳೆದ ಬಜೆಟ್ ನಲ್ಲಿ ಕೇಂದ್ರ ಸರ್ಕಾರ 5000 ಕೋಟಿ ನೀಡುವುದಾಗಿ ಘೋಷಣೆ ಮಾಡಿತು. ಆದರೆ, ಇಲ್ಲಿಯವರೆಗೂ ಯಾವುದೇ ಅನುದಾನವನ್ನು ನೀಡಿಲ್ಲ, ಈ ನಿಟ್ಟಿನಲ್ಲಿ ಸಹ ಕೇಂದ್ರ ಸರ್ಕಾರ ಗಮನಹರಿಸಬೇಕಿದೆ ಎಂದು ಇದೇ ಸಂದರ್ಭದಲ್ಲಿ ಶಾಸಕ ಶಿವಲಿಂಗೇಗೌಡ ಆಗ್ರಹಿಸಿದರು.

ಗಂಡಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋ ಬಾಬು ಅವರು ಮಾತನಾಡಿ, ಮೇಕೆದಾಟು ಯೋಜನೆ ಅನುಷ್ಠಾನದಿಂದ ಕರ್ನಾಟಕಕ್ಕೆ ಮಾತ್ರವಲ್ಲ, ತಮಿಳುನಾಡಿಗೂ ಲಾಭವಾಗಲಿದೆ ಎಂದ ಅವರು, ಮೇಕೆದಾಟು ಯೋಜನೆಯ ಅನುಷ್ಠಾನದಿಂದ ರಾಜ್ಯಕ್ಕಾಗುವ ಅನುಕೂಲವನ್ನು ಅರಿತೇ ನಮ್ಮ ನೀರು ನಮ್ಮ ಹಕ್ಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ರಾಜ್ಯಾಧ್ಯಕ್ಷ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಪಾದಯಾತ್ರೆ, ನಡೆಸುವ ಮೂಲಕ ರಾಜ ಮಾತ್ರವಲ್ಲ, ದೇಶದಲ್ಲಿ ಪಾದಯಾತ್ರೆ ಗಮನ ಸೆಳೆದಿತ್ತು ಎಂದರು.

ಈ ಸಂದರ್ಭದಲ್ಲಿ ನಗರಸಭೆಯ ನಿಕಟ ಪೂರ್ವ ಅಧ್ಯಕ್ಷ ಎಂ.ಸಮಿವುಲ್ಲಾ, ಉಪಾಧ್ಯಕ್ಷ ಮನೋಹರ ಮೇಸ್ತ್ರಿ, ಕಾಂಗ್ರೆಸ್ ಮುಖಂಡರಾದ ವೆಂಕಟಮುನಿ, ಮಂಜರಾಜು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಧರ್ಮಶೇಖರ್, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷೆ ಮಂಜುಳಾಬಾಯಿ ಚಂದ್ರನಾಯ್ಕ, ಸಿಕಂದರ್, ಸುಬ್ರಮಣ್ಯ ಬಾಬು, ಶ್ರೀನಿವಾಸ್, ನಗರಸಭೆ ಮಾಜಿ ಅಧ್ಯಕ್ಷ ಮೋಹನ್‌ಕುಮಾರ್, ಮತ್ತಿತರರು ಉಪಸ್ಥಿತರಿದ್ದರು.

# ರಸ್ತೆ ಅಭಿವೃದ್ಧಿಗೆ ಒತ್ತಾಯಿಸಿ ನಾಗರಿಕರ ಪ್ರತಿಭಟನೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ತಾಲ್ಲೂಕಿನ ಚನ್ನರಾಯಪಟ್ಟಣ ಮಾರ್ಗದ ರಸ್ತೆ ಅಭಿವೃದ್ದಿಪಡಿಸುವಂತೆ ಒತ್ತಾಯಿಸಿ ನಾಗರಿಕರು ಪ್ರತಿಭಟನೆ ನಡೆಸಿದರು.



ತಟ್ಟೆಕೆರೆ ಗ್ರಾಮ ಸಮೀಪ ಸರಕಾರಿ ಆದರ್ಶ ಶಾಲೆಯ ಮುಂದೆ ಶುಕ್ರವಾರ ಶಾಲೆಯಲ್ಲಿ ವಿದ್ಯಾರ್ಥಿಗಳ ಪೋಷಕರ ಸಭೆ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಸಭೆಗೆ ಬಂದ ಪೋಷಕರು ರಸ್ತೆ ಸ್ಥಿತಿಯಿಂದ ಬೇಸತ್ತಿರುವ ಬಗ್ಗೆ ಪ್ರಸ್ತಾಪಿಸಿ ಪ್ರತಿಭಟನೆಗೆ ಮುಂದಾದರು. ಇದಕ್ಕೆ ಪಕ್ಕದ ಸರ್ಕಾರಿ ಡಿಪ್ಲಮೋ ಕಾಲೇಜಿನ ವಿದ್ಯಾರ್ಥಿಗಳ ಪೋಷಕರು ಹಾಗೂ ಅಕ್ಕ ಪಕ್ಕದ ಗ್ರಾಮಸ್ಥರೂ ಒಗ್ಗೂಡಿ ಪ್ರತಿಭಟನೆಗೆ ಕೈಜೋಡಿಸಿದರು.

ಹಿರಿಸಾವೆಯಿಂದ ಶನಿವಾರಸಂತೆ ವರೆಗಿನ ನಂ.8 ರ ರಾಷ್ಟ್ರೀಯ ಹೆದ್ದಾರಿ ಇದಾಗಿದೆ. ಪಟ್ಟಣದಿಂದ ಆದರ್ಶ ಶಾಲೆವರೆಗೂ ಸರಿಯಾದ ಸರಿಯಿಲ್ಲದೆ ಸಂಪೂರ್ಣ ರಸ್ತೆ ಗುಂಡಿಮಯವಾಗಿದೆ. ಇದರಿಂದ ಶಾಲೆಗೆ ಮಕ್ಕಳನ್ನು ಬಿಡಲು ಮತ್ತು ವಾಪಾಸ್ಸು ಕರೆತರಲು ರಸ್ತೆ ಗುಂಡಿಗಳು ಸಂಚಕಾರ ತರುತ್ತಿವೆ. ಆಗಾಗ್ಗೆ ರಸ್ತೆ ಗುಂಡಿಗೆ ಇಳಿಯುವ ವಾಹನ ಚಕ್ರಗಳು ಪ್ರಯಾಸದ ಸಂಚಾರಕ್ಕೀಡು ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ 10 ವರ್ಷಗಳ ಹಿಂದೆ ಗುಂಡಿ ಮುಚ್ಚಿ ರಸ್ತೆ ಸಂಚಾರ ಸುಗಮಗೊಳಿಸಲಾಗಿತ್ತು. ಇದೀಗ ಮಳೆಗಾಲದಲ್ಲಿ ಗುಂಡಿ ಬಿದ್ದು, ರಸ್ತೆಯಲ್ಲಿ ಸಂಚರಿಸಲಾಗದ ಸ್ಥಿತಿ ತಲುಪಿದೆ. ಸ್ವಲ್ಪ ಹಿಡಿತ ತಪ್ಪಿದ ಅನೇಕ ಬೈಕ್ ಸವಾರರು ಬಿದ್ದು ಗಾಯಗೊಂಡಿದ್ದಾರೆ ಎಂದು ಶಾಲೆಯ ಪೋಷಕರ ದೂರಿದರು.

ಮೂಡಲಹಿಪ್ಪೆ, ಉಲಿವಾಲ, ಗುಂಜೇವು ಸೇರಿದಂತೆ ಹತ್ತಾರು ಗ್ರಾಮಗಳು ಚನ್ನರಾಯಪಟ್ಟಣ ಮಾರ್ಗದಲ್ಲೇ ತಿರುಗಾಟ ನಡೆಸಬೇಕಿದೆ. ನಿತ್ಯ ಸಾವಿರಾರು ರೈತರು ಇದೇ ಮಾರ್ಗದಲ್ಲಿ ತಮ್ಮ ಕೃಷಿ ಉತ್ಪನ್ನಗಳನ್ನು ತರಬೇಕಿದೆ. ಶ್ರೀನಿವಾಸಪುರ ಸಕ್ಕರೆ ಕಾರ್ಖಾನೆಗೆ ಕಬ್ಬು ತುಂಬಿದ ಬಾರಿ ಲಾರಿ, ಟ್ರ್ಯಾಕ್ಟರ್‌ಗಳು ಇದೇ ಮಾರ್ಗದಲ್ಲಿ ಸಂಚಾರ ನಡೆಸಿದೆ. ಬೆಂಗಳೂರಿಗೆ ತೆರಳಲು ನೇರ ಮಾರ್ಗವಾಗಿದೆ. ಆದರೂ ಇಂತಹಾ ರಸ್ತೆಯನ್ನು ನಿರ್ಲಕ್ಷಿಸಲಾಗಿದೆ ಎನ್ನುವುದು ಗ್ರಾಮಸ್ಥರ ಆರೋಪವಾಗಿದೆ.

ಶಾಲಾ ಅಭಿವೃದ್ದಿ ಸಮಿತಿ ಅಧ್ಯಕ್ಷ ಗಿರೀಶ್, ಉಪಾಧ್ಯಕ್ಷೆ ಕುಸುಮಾ, ಸದಸ್ಯ ಆನಂದ, ಅನಿಲ್‌ಕುಮಾರ್, ಅಶ್ವಥ್, ರಘು ಸೇರಿದಂತೆ ನೂರಾರು ಗ್ರಾಮಸ್ಥರು ಹಾಜರಿದ್ದರು.



**ಅರಕಲಗೂಡು:** ಬಿಹಾರ ರಾಜ್ಯದ ವಿಧಾನ ಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಜಯ ಗಳಿಸಿದ್ದನ್ನು ಸ್ವಾಗತಿಸಿ ಪಟ್ಟಣದಲ್ಲಿ ಶುಕ್ರವಾರ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು. ಅನಕೃ ವೃತ್ತದಲ್ಲಿ ಜಮಾಯಿಸಿದ ಕಾರ್ಯಕರ್ತರು, ಪಕ್ಷ ಹಾಗೂ ಪಕ್ಷದ ನಾಯಕರ ಪರ ಘೋಷಣೆಗಳನ್ನು ಕೂಗಿದರು. ಮುಖಂಡರಾದ ಪಿ.ಟಿ.ಕೇಶವೇಗೌಡ, ಎಚ್.ಮಾದೇಶ್, ಹೊಂಡರವಳ್ಳಿ ಲೋಕೇಶ್ ಮಾತನಾಡಿ, ಪ್ರಧಾನಿ ನರೇಂದ್ರಮೋದಿ ಮತ್ತು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ನಾಯಕತ್ವವನ್ನು ಜನ ಬೆಂಬಲಿಸಿ ಪ್ರಚಂಡ ಬಹುಮತ ನೀಡಿರುವುದು ಸ್ವಾಗತಾರ್ಹವಾಗಿದೆ ಎಂದರು. ಮುಖಂಡರಾದ ರಘು, ರವಿಕುಮಾರ್, ಅರುಣ್‌ಕುಮಾರ್, ತಮ್ಮಯ್ಯ ಅರಸ್, ಚಂದ್ರಶೇಖರ್, ಮುರಳೀಧರ್ ಹಾಜರಿದ್ದರು

## ಮುಂದೂಡಿಕೆ

**ಹಾಸನ:** ಸಾರ್ವಜನಿಕ ಕುಂದು ಕೊರತೆ ಅಹವಾಲನ್ನು ದಾಖಲಿಸಲು ಸರ್ಕಾರವು ಏಕೀಕೃತ ಸಾರ್ವಜನಿಕ ದೂರು ನಿವಾರಣಾ ತಂತ್ರಾಂಶ (Integrated Public Grievance Redressal System) ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ ಅವರ ಅಧ್ಯಕ್ಷತೆಯಲ್ಲಿ ನ.11 ರಂದು ತಾಲ್ಲೂಕು ಕಚೇರಿ ಚನ್ನರಾಯಪಟ್ಟಣದಲ್ಲಿ ನಡೆದಿರುವ ಕಾರಣ ಜಿಲ್ಲಾ ಮಟ್ಟದಲ್ಲಿ ನ.15 ರಂದು ನಡೆಯುವ ಜನಸ್ಪಂದನಾ ಸಭೆಯನ್ನು ಮುಂದೂಡಲಾಗಿದೆ. ಮುಂದಿನ ಮಾಹೆಯಿಂದ ಯಥಾಸ್ಥಿತಿಯಂತೆ ಜಿಲ್ಲಾ ಮಟ್ಟದಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರ ಡಿ.20 ರಂದು ಜನಸ್ಪಂದನ ಕಾರ್ಯಕ್ರಮವನ್ನು ನಡೆಸಲಾಗುವುದೆಂದು ಜಿಲ್ಲಾಧಿಕಾರಿ ಅವರು ತಿಳಿಸಿದ್ದಾರೆ.

# ನಕಲಿ ದಾಖಲೆ ಸೃಷ್ಟಿಸಿ ಪೌತಿಖಾತೆ: ಕ್ರಮಕ್ಕೆ ಆಗ್ರಹ

• ಪ್ರಜೋದಯ ವರದಿ

**ಸಕಲೇಶಪುರ:** ನಕಲಿ ದಾಖಲೆ ಸೃಷ್ಟಿಸಿ ಪೌತಿಖಾತೆ ಮಾಡಿಕೊಂಡಿರುವ ಸದರಿ ವ್ಯಕ್ತಿ ಹಾಗೂ ಅವರಿಗೆ ಸಹಕರಿಸಿದ ಕಂದಾಯ ಇಲಾಖೆಯ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಜೈ ಭೀಮ್ ಕ್ರಾಂತಿ ಸೇನೆಯ ಜಿಲ್ಲಾ ಸಂಚಾಲಕ ಬಸವರಾಜ್ ಬೆಳಗೋಡು ಒತ್ತಾಯಿಸಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಶುಕ್ರವಾರ ಮಾತನಾಡಿದ ಅವರು, ತಾಲ್ಲೂಕಿನ ಬೆಳಗೋಡು ಹೋಬಳಿಯ ಚಿಕ್ಕನಾಯಕನಹಳ್ಳಿ ಗ್ರಾಮದಲ್ಲಿ ಜಮೀನಿನ ಸುಳ್ಳು ದಾಖಲೆ ಸೃಷ್ಟಿಸಿ ಪೌತಿಖಾತೆ ಮಾಡಿಕೊಂಡಿರುವ ಆರೋಪದ ಹಿನ್ನಲೆಯಲ್ಲಿ ಶೇಖ್ ಮಹಮ್ಮದ್ ಬಿನ್ ಅಬ್ದುಲ್ ಕರೀಂ ಹಾಗೂ ಅವರಿಗೆ ಸಹಕರಿಸಿದ ಕಂದಾಯ ಇಲಾಖೆಯ ಕೆಲವು ಅಧಿಕಾರಿಗಳ ವಿರುದ್ಧ ತಕ್ಷಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರಲ್ಲದೆ, ಸರ್ವೆ ನಂ. 68ರಲ್ಲಿ 1-20 ಎರೆ ಜಮೀನು ಎಲ್.ಎನ್.ಡಿ 43/82-83 ಆದೇಶದಂತೆ ಪರಿಶಿಷ್ಟ ಜಾತಿಗೆ ಮೀಸಲಾದ ಕೋಟಾದಡಿ ಸಿದ್ದಯ್ಯ ಬಿನ್ ಪುಟ್ಟಯ್ಯ ಅವರಿಗೆ ಮಂಜೂರು ಮಾಡಲಾಗಿತ್ತು ಎಂದು ಅವರು ವಿವರಿಸಿದರು.

ಸಿದ್ದಯ್ಯ ಅವರು ಮರಣ ಹೊಂದಿದ ನಂತರ ಎಂ.ಆರ್ 5/84-85 ಮೂಲಕ ಅವರ ಪತ್ನಿ ಸಿದ್ದಮ್ಮ ಕೋಂ ಸಿದ್ದಯ್ಯ ಅವರ ಹೆಸರಿನಲ್ಲಿ ಪೌತಿಖಾತೆ ದಾಖಲಾಗಿತ್ತು. ಸಿದ್ದಮ್ಮ ಅವರು ಇಂದಿಗೂ ಜೀವಂತವಾಗಿದ್ದಾರೆ ಎಂದು ಕುಟುಂಬದವರು ಸ್ಪಷ್ಟಪಡಿಸಿದ್ದಾರೆ. ಆದರೆ, ಶೇಖ್ ಮಹಮ್ಮದ್ ಬಿನ್ ಅಬ್ದುಲ್ ಕರೀಂ ಎಂಬವರು ಸುಳ್ಳು ಹೇಳಿಕೆ ನೀಡಿ ''ಸಿದ್ದಯ್ಯ ನನ್ನ ತಂದೆ'' ಎಂದು ತೋರಿಸಿ, ದಾಖಲೆಗಳನ್ನು ತಿರುಚಿ, ಸಿದ್ದಮ್ಮ ಅವರನ್ನು ''ಮೃತರು'' ಎಂದು ದಾಖಲಿಸಿ ಜಮೀನಿನ ಪೌತಿಖಾತೆ ಮಾಡಿಕೊಂಡಿರುವುದು ಗಂಭೀರ ಅಪರಾಧವೆಂದು ಅವರು ಆರೋಪಿಸಿದರು.

ಈ ಖೋಟಾ ದಾಖಲೆ ಸೃಷ್ಟಿ ಪ್ರಕ್ರಿಯೆಯಲ್ಲಿ ಗ್ರಾಮಲೆಕ್ಕಿಗರು, ರೆವಿನ್ಯೂ ಇನ್ಸ್‌ಪೆಕ್ಟರ್, ಉಪ ತಹಸೀಲ್ದಾರ್ ಸೇರಿದಂತೆ ಕಂದಾಯ ಇಲಾಖೆಯ ಕೆಲ ಅಧಿಕಾರಿಗಳು ಸಹಕರಿಸಿರುವ ಅನುಮಾನವಿದೆ. ಕುಟುಂಬದವರಿಗೆ ತಮ್ಮ ಜೀವಕ್ಕೂ ಬೆದರಿಕೆ ಇದೆ ಎಂದು ತಿಳಿಸಿ, ತಪ್ಪಿತಸ್ಥರನ್ನು ತಕ್ಷಣ ಬಂಧಿಸಬೇಕು ಮತ್ತು ಸಾಕ್ಷಿ ನಾಶ ಮಾಡುವ ಸಾಧ್ಯತೆ ಇರುವುದರಿಂದ ಮುಂಜಾಗ್ರತಾ ಗಡಿಪಾರು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಪ್ರಕರಣದಲ್ಲಿ ಕ್ರಮ ಕೈಗೊಳ್ಳದೆ ಇದ್ದರೆ ಸರ್ಕಾರ ಮತ್ತು ಸಂಬಂಧಿತ ಇಲಾಖೆ ನಿರ್ಲಕ್ಷ್ಯಕ್ಕೆ ಹೊಣೆಗಾರರಾಗುತ್ತವೆ ಎಂದು ಅವರು ಎಚ್ಚರಿಸಿದರು.

ಸಿದ್ದಮ್ಮನ ಮಗ ನಿಂಗರಾಜು ಮಾತನಾಡಿ, ನಮ್ಮ ಕುಟುಂಬಕ್ಕೆ ಯಾವುದೇ ಅನಾಹುತ ಸಂಭವಿಸಿದರೆ, ಅದರ ಹೊಣೆಗಾರರು ಶೇಖ್ ಮಹಮದ್ ಬಿನ್ ಅಬ್ದುಲ್ ಕರೀಂ ಹಾಗೂ ಅವರಿಗೆ ಬೆಂಬಲಿಸಿದ ಅಧಿಕಾರಿಗಳೇ ಎಂದು ಹೇಳಿದರು.

ಸಂಘದ ಮುಖಂಡ ಉದಯ್ ಕುಮಾರ್ ಮಾತನಾಡಿ, ಭ್ರಷ್ಟಾಚಾರ ಮತ್ತು ಸುಳ್ಳು ದಾಖಲೆ ಸೃಷ್ಟಿಗೆ ಯಾವುದೇ ರೀತಿಯ ಸಹನಶೀಲತೆ ತೋರದೆ, ತಪ್ಪಿತಸ್ಥರು ಮತ್ತು ಅವರಿಗೆ ಸಹಕಾರ ಮಾಡಿದ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಯಲ್ಲಪ್ಪ, ಸಿದ್ದಮ್ಮ ಸೇರಿದಂತೆ ಇನ್ನಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಉಗ್ರ ಉಮರ್ ಮನೆ ಧ್ವಂಸ

• ಪ್ರಜೋದಯ ವರದಿ

**ಶ್ರೀನಗರ:** ದೆಹಲಿಯ ಕೆಂಪು ಕೋಟೆ ಸಮೀಪದಲ್ಲಿ ಆತ್ಮಾಹುತಿ ಬಾಂಬ್ ಸ್ಫೋಟದ ಶಂಕಿತ ಆರೋಪಿ ಡಾ. ಉಮರ್ ನಬಿ ಮನೆಯನ್ನು ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಧ್ವಂಸಗೊಳಿಸಿ ಭಯೋತ್ಪಾದಕರಿಗೆ ಎಚ್ಚರಿಕೆ ಸಂದೇಶ ನೀಡಲಾಗಿದೆ

ಕೆಂಪುಕೋಟೆ ಬಳಿ ಸ್ಫೋಟಗೊಂಡ ಕಾರನ್ನು ಚಲಾಯಿಸುತ್ತಿದ್ದುದು ಉಮರ್ ನಬಿ ಎನ್ನುವುದು ತನಿಖೆಯಲ್ಲಿ ದೃಢಪಟ್ಟಿದೆ. ಹುಂಡೈ ಐ-20 ಕಾರಿನಲ್ಲಿ ದೊರೆತ ದೇಹದ ಭಾಗಗಳನ್ನು ಉಮರ್ ತಾಯಿಯ ಡಿಎನ್‌ಎ ಜತೆ ಪರೀಕ್ಷಿಸಿದ ಬಳಿಕ ಅದು ಸ್ಪಷ್ಟವಾಗಿದೆ. ಸ್ಫೋಟದ ವೇಳೆ ಕಾರಿನಲ್ಲಿ ಉಮರ್ ಒಬ್ಬನೇ ಇದ್ದ ಎಂಬುದನ್ನೂ ತನಿಖಾಧಿಕಾರಿಗಳು ದೃಢಪಡಿಸಿದ್ದಾರೆ.

# ಪ್ರತಿಯೊಂದು ವರ್ಗಕ್ಕೂ ಸಹಕಾರ ಸಂಘಗಳು ನೆರವು

• ಪ್ರಜೋದಯ ವರದಿ

**ಹಾಸನ:** ಪ್ರತಿಯೊಂದು ವರ್ಗದವರಿಗೂ ಸಹಕಾರ ಸಂಘಗಳು ಹಣಕಾಸಿನ ನೆರವು ನೀಡುವ ಮೂಲಕ ಗ್ರಾಮೀಣ ಭಾಗದಲ್ಲಿನ ರೈತರು, ಕಾರ್ಮಿಕರು, ಮಹಿಳೆಯರು ಆರ್ಥಿಕವಾಗಿ ಸಬಲರಾಗಲು ಸಹಾಯವಾಗುತ್ತಿದೆ ಎಂದು ಶಾಸಕ ಸ್ವರೂಪ್ ಪ್ರಕಾಶ್ ಅವರು ತಿಳಿಸಿದ್ದಾರೆ.

ಹಾಸನ ಜಿಲ್ಲಾ ಸಹಕಾರ ಒಕ್ಕೂಟ ನಿ., ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು. ಹಾಸನ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಹಾಸನ ತಾಲ್ಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಲು ಉತ್ಪಾದಕರ ಸಹಕಾರ ಸಂಘಗಳು ಹಾಗೂ ತಾಲ್ಲೂಕಿನ ಎಲ್ಲಾ ರೀತಿಯ ಸಹಕಾರ ಸಂಘಗಳು ಮತ್ತು ಸಹಕಾರ ಆಡಳಿತ ಮತ್ತು ಲೆಕ್ಕ ಪರಿಶೋಧನ ಇಲಾಖೆ, ಹಾಸನ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ಹೆಚ್.ಡಿ.ಸಿ.ಸಿ ಬ್ಯಾಂಕ್‌ನ ಹೆಚ್.ಡಿ ದೇವೇಗೌಡ ರೈತ ಸಭಾಂಗಣದಲ್ಲಿ ಆಯೋಜಿಸಿದ್ದ 72ನೇ ಅಖಿಲ ಭಾರತ ಸಹಕಾರ ಸಪ್ತಾಹ -2025 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ದೇಶದ ಸರ್ಕಾರ ನಡೆಯುತ್ತಿದೆ ಎಂದರೆ ಅದಕ್ಕೆ ಪರ್ಯಾಯವಾಗಿ ಸಹಕಾರ ಸಂಘಗಳು ಕೆಲಸ ಮಾಡುತ್ತಿವೆ ಎಂದರು.



ಪ್ರಸ್ತುತ ದಿನಮಾನಗಳಲ್ಲಿ ಸಂಘ ಸಂಸ್ಥೆಗಳನ್ನು ಉಳಿಸುವುದು, ಬೆಳೆಸುವುದು ಬಹಳ ಕಷ್ಟವಿದೆ ಆದರೂ ಸಹ ನಿಸ್ವಾರ್ಥ ಸೇವೆಯಿಂದ ಎಲ್ಲಾ ಸಹಕಾರಿಗಳು ಬಹಳ ದೊಡ್ಡ ಮಟ್ಟದಲ್ಲಿ ಸಹಕಾರಿ ಸಂಘಗಳನ್ನು ಬೆಳೆಸಿಕೊಂಡು ಬರುತ್ತಿದ್ದೀರಿ. ತಮ್ಮ ಸೇವೆಯನ್ನು ಇದೇ ರೀತಿ ಸದಾ ಕಾಲ ಮುಂದುವರಿಸಿ ಎಂದು ತಿಳಿಸಿದರು.

ಸಹಕಾರಿ ಬ್ಯಾಂಕುಗಳ ಸಹಕಾರಿಗಳ ಸಹಕಾರದಿಂದ ಇಂದು ಹಾಸನ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಅಧ್ಯಕ್ಷ ಸೋಮನಹಳ್ಳಿಯ ನಾಗರಾಜು ಅವರಿಗೆ ಸಹಕಾರಿ ರತ್ನ ಪ್ರಶಸ್ತಿ ಲಭ್ಯವಾಗಿದೆ ಎಂದು ಅವರಿಗೆ ಶುಭಾಶಯಗಳನ್ನು ತಿಳಿಸಿದರು.

ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ., ಉಪಾಧ್ಯಕ್ಷ ಆರ್.ಎನ್. ಶೇಖರಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಸಹಕಾರ ಒಕ್ಕೂಟ ನಿ., ಅಧ್ಯಕ್ಷ ಎಸ್.ಎನ್.ಪ್ರಕಾಶ್ ಇತರರು ಹಾಜರಿದ್ದರು.

# ಪಿಎಂಶ್ರೀ ಶಾಲೆಯಲ್ಲಿ ಪೋಷಕರು-ಶಿಕ್ಷಕರ ಮಹಾಸಭೆ

• ಪ್ರಜೋದಯ ವರದಿ

**ಕೊಣನೂರು:** ಪಟ್ಟಣದ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶುಕ್ರವಾರ ಪೋಷಕರು-ಶಿಕ್ಷಕರ ಮಹಾಸಭೆ ಹಾಗು ಮಕ್ಕಳ ದಿನಾಚರಣೆ ಹಮ್ಮಿಕೊಳ್ಳಲಾಗಿತ್ತು.



ಸಂಪನ್ಮೂಲ ವ್ಯಕ್ತಿ ನಾಗರಾಜ್ ಅವರು ಮಾತನಾಡಿ, ಇಂದಿನ ಮಕ್ಕಳು ಭವಿಷ್ಯದ ಆಸ್ತಿ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವುದು ಪೋಷಕರ ಕರ್ತವ್ಯ. ಮನೆಯಲ್ಲಿ ವಾತಾವರಣ ಹೇಗಿರುತ್ತದೋ ಮಕ್ಕಳು ಅದೇ ರೀತಿ ಬೆಳೆಯುತ್ತಾರೆ. ಆದ್ದರಿಂದ ತಂದೆ ತಾಯಿ ಎಚ್ಚರಿಕೆಯಿಂದ ಇರಬೇಕು. ಅವಾಚ್ಯ ಶಬ್ದಗಳ ಬಳಕೆ, ದುಶ್ಚಟ ಮಕ್ಕಳ ಮೇಲೆ ಪರಿಣಾಮ ಬೀರುತ್ತವೆ. ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವ ಮೂಲಕ ಶ್ರೇಷ್ಠ ಆಸ್ತಿಯಾಗಿ ರೂಪಿಸಬೇಕೆಂದರು.

ಶಿಕ್ಷಕ ಶೇಷಾಚಲ ಅವರು ಮಾತನಾಡಿ, ಬಾಲ್ಯದಲ್ಲಿ ಖುಷಿಯನ್ನು ಅನುಭವಿಸಿದರೆ ಮುಪ್ಪಿನಲ್ಲಿ ನೋವು ಅನುಭವಿಸುತ್ತೇವೆ. ಸರ್ಕಾರವು ಶಿಕ್ಷಣವನ್ನು ಉತ್ತೇಜಿಸಲು ಹಲವಾರು ಕಾರ್ಯಕ್ರಮಗಳನ್ನ ಜಾರಿಗೆ ತಂದಿದ್ದು ಅವುಗಳ ಪ್ರಯೋಜನ ಪಡೆಯಬೇಕು. ಮಕ್ಕಳನ್ನು ವಿದ್ಯಾವಂತರಾಗಿ ಮಾಡಲು ಪೋಷಕರು ಪಣತೊಟ್ಟು ಅವರ ಉನ್ನತ ಮಟ್ಟಕ್ಕೆ ಕಾರಣವಾಗಬೇಕು. ಪೋಷಕರು ಮತ್ತು ಶಿಕ್ಷಕರು ಸೇರಿ ಒಬ್ಬ ವಿದ್ಯಾರ್ಥಿ ಜೀವನ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆಂದು ಹೇಳಿದರು.

ಸಮಾಜ ಶಿಕ್ಷಕಿ ಎಲ್ಲಾ ಶಾಲಾ ಮಕ್ಕಳಿಗೆ ಸಂವಿಧಾನ ಪೀಠಿಕೆಯ ಪ್ರತಿಜ್ಞೆ ಬೋಧಿಸಿದರು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಮುಖ್ಯ ಶಿಕ್ಷಕ ಮಹೇಶ್, ಸಿಆರ್‌ಪಿ ಕುಮಾರ್, ಶಿಕ್ಷಕ ಶೇಷಾಚಲ, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ರಾಜು, ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರಾದ ರಂಗಸ್ವಾಮಿ, ಸುನಂದ, ಸವಿತಾ ಇದ್ದರು.

# ಬಿಹಾರದಲ್ಲಿ ಎನ್‌ಡಿಎ ಗೆಲುವು: ಸಂಭ್ರಮಾಚರಣೆ

• ಪ್ರಜೋದಯ ವರದಿ

**ಸಕಲೇಶಪುರ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಬಿಹಾರ ಮತದಾರರು ಮತ್ತೊಮ್ಮೆ ಎನ್‌ಡಿಎ ಪರ ನಿಂತಿರುವುದು ಜನಪರ ಆಡಳಿತದ ಗೆಲುವಾಗಿದೆ ಎಂದು ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವತ್ ತಿಳಿಸಿದ್ದಾರೆ.



ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಭರ್ಜರಿ ಬಹುಮತ ಪಡೆದ ಹಿನ್ನೆಲೆಯಲ್ಲಿ ಪಟ್ಟಣದ ಹಳೆ ಬಸ್ ನಿಲ್ದಾಣದಲ್ಲಿ ಬಿಜೆಪಿ ವತಿಯಿಂದ ವಿಜಯೋತ್ಸವ ಮತ್ತು ಸಂಭ್ರಮಾಚರಣೆಯಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದಲ್ಲಿ ನಡೆಯುತ್ತಿರುವ ಅಭಿವೃದ್ಧಿ, ಪಾರದರ್ಶಕ ಆಡಳಿತ, ಬಡವರ ಪರದ ಯೋಜನೆಗಳು ಬಿಹಾರ ಮತದಾರರನ್ನು ಮತ್ತೊಮ್ಮೆ ಎನ್‌ಡಿಎ ಪರ ನಿಲ್ಲಿಸುವಲ್ಲಿ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು.

ಬಿಹಾರ ಜನರು ಮತ್ತೆ ಮೋದಿ ಅವರ ಕೈ ಹಿಡಿದಿದ್ದಾರೆ. ಕಾಂಗ್ರೆಸ್ ಪಕ್ಷ ವೋಟ್ ಚೋರಿ ಎಂದು ಚುನಾವಣಾ ಆಯೋಗಕ್ಕೆ ಮತ್ತು ಬಿಜೆಪಿ ವಿರುದ್ಧವೂ ಅಪಪ್ರಚಾರ ನಡೆಸಿದರೂ ಮತದಾರರಿಂದ ಯಾವುದೇ ಬೆಂಬಲ ಪಡೆಯಲು ಸಾಧ್ಯವಾಗಿಲ್ಲ. ಈ ಚುನಾವಣೆ ದೇಶದ ಜನತೆ ಮೋದಿ ಪರ ನಿಂತಿರುವುದನ್ನು ಸ್ಪಷ್ಟಪಡಿಸಿದೆ ಎಂದು ಹೇಳಿದರು.

ಶಾಸಕರ ಧರ್ಮಪತ್ನಿ ಪ್ರತಿಭಾ ಮಂಜುನಾಥ್, ತಾಲ್ಲೂಕು ಮುಖಂಡರಾದ ಯೋಗೇಶ್, ಅಗ್ನಿ ಸೋಮಶೇಖರ್, ಮಧು ಬೊಮ್ಮನಕೆರೆ, ಲೋಕೇಶ, ನಾರಾಯಣ ಆಳ್ವ, ಪ್ರದೀಪ್, ಶರತ್ ವೀರಾಸ್, ಬಾಳೆಗದ್ದೆ ಲೋಕೇಶ್, ರೋಹಿತ್, ನವೀನ್‌ಶೆಟ್ಟಿ, ಪ್ರಸನ್ನ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ನುಗ್ಗೇಹಳ್ಳಿಯಲ್ಲಿ ಕೊಬ್ಬರಿ ಸಗಟು ಮಾರಾಟ ಕೇಂದ್ರ ಆರಂಭ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ನುಗ್ಗೇಹಳ್ಳಿ ಹೋಬಳಿ ಕೇಂದ್ರದಲ್ಲಿ ಕೇರಳ ರಾಜ್ಯದ ಉದ್ಯಮಿಗಳಿಂದ ನೂತನವಾಗಿ ರಾಘವ್ ಟ್ರೇಡರ್ಸ್ ಕೊಬ್ಬರಿ ಸಗಟು ಮಾರಾಟ ಕೇಂದ್ರ ಪ್ರಾರಂಭಗೊಂಡಿದ್ದು, ಇದರಿಂದ ತಾಲ್ಲೂಕಿನ ಹಾಗೂ ಹೋಬಳಿ ಕೇಂದ್ರದ ರೈತರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ. ಗೋಪಾಲಸ್ವಾಮಿ ಹೇಳಿದರು.

## ರೈತರಿಗೆ ಹೆಚ್ಚಿನ ಅನುಕೂಲ: ಗೋಪಾಲಸ್ವಾಮಿ



ತಾಲ್ಲೂಕಿನ ನುಗ್ಗೇಹಳ್ಳಿ ಹೋಬಳಿ ಕೇಂದ್ರದ ಹಿರಿಸಾವೆ ರಸ್ತೆಯಲ್ಲಿ ಇರುವ ರಾಘವ್ ಟ್ರೇಡರ್ಸ್ ಕೊಬ್ಬರಿ ಖರೀದಿ ಕೇಂದ್ರವನ್ನು ಅವರು ಉದ್ಘಾಟಿಸಿ ಮಾತನಾಡಿ, ರೈತರಿಗೆ ಪ್ರಸ್ತುತ ತೆಂಗಿನಕಾಯಿ ಹಾಗೂ ಕೊಬ್ಬರಿ ಬೆಲೆ ಹೆಚ್ಚಳದಿಂದ ಹೆಚ್ಚಿನ ಅನುಕೂಲವಾಗಿದೆ. ತಾಲ್ಲೂಕಿನಲ್ಲಿ ಅನೇಕ ಕಡೆಗಳಲ್ಲಿ ತೆಂಗಿನ ನುಸಿ ರೋಗ ಹಾಗೂ ಇತರೆ ಕಾಯಿಲೆಗಳಿಂದ ತೆಂಗಿನ ಫಸಲು ಹಾಳಾಗಿದ್ದು, ಈ ಬಗ್ಗೆ ರೈತರ ಹಿತದೃಷ್ಟಿಯಿಂದ ಸಂಬಂಧಪಟ್ಟ ಸಚಿವರಿಗೆ ತೆಂಗು ಬೆಳೆ ಹಾಳಾಗಿರುವ ರೈತರಿಗೆ ಪರಿಹಾರ ನೀಡುವಂತೆ ಒತ್ತಾಯಿಸುವುದಾಗಿ ಅವರು ತಿಳಿಸಿದರು.

ಹೋಬಳಿ ಕೇಂದ್ರದಲ್ಲಿ ಕೇರಳ ರಾಜ್ಯದ ಉದ್ಯಮಿಗಳಾದ ಚೇತನ್ ಶಾ ಹಾಗೂ ಹರಿದ್ರನ್ ಸಹಭಾಗಿತ್ವದಲ್ಲಿ ರಾಘವ್ ಟ್ರೇಡರ್ಸ್ ಎಂಬ ನೂತನ ಕೊಬ್ಬರಿ ಸಗಟು ಖರೀದಿ ಕೇಂದ್ರ ಪ್ರಾರಂಭಗೊಂಡಿದ್ದು, ತಿಪಟೂರು ಹಾಗೂ ಅರಸೀಕೆರೆ ಹರಾಜು ಪ್ರಕ್ರಿಯೆಯಂತೆ ಇಲ್ಲಿನ ರೈತರಿಗೆ ಹಣ ಸಿಗಲಿದೆ ಜೊತೆಗೆ ಸಾಗಾಣಿಕೆ ವೆಚ್ಚವೂ ಕೂಡ ಉಳಿಯಲಿದೆ ಎಂದು ಹೇಳಿದರು.

ಜೆಡಿಎಸ್ ಯುವ ಮುಖಂಡ ಜೈದೀಪ್‌ಗೌಡ ಅವರು ಮಾತನಾಡಿ, ಇದೀಗ ಪ್ರಾರಂಭಿಸಿರುವ ನೂತನ ಉದ್ಯಮ ಬೃಹದಾಕಾರವಾಗಿ ಬೆಳೆದು ತಾಲ್ಲೂಕಿನ ರೈತರಿಗೆ ಸಹಕಾರಿಯಾಗಲಿ ಎಂದು ಶುಭ ಕೋರಿದರು.

ಈ ಸಂದರ್ಭದಲ್ಲಿ ಖರೀದಿ ಕೇಂದ್ರದ ಮಾಲೀಕರು ಎಂ.ಎ. ಗೋಪಾಲಸ್ವಾಮಿ ಮತ್ತು ಜೈದೀಪ್ ಗೌಡರನ್ನು ಸನ್ಮಾನಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಹೊನ್ನೇಗೌಡ, ಕೃಷಿ ಪತ್ತಿನ ಮಾಜಿ ಅಧ್ಯಕ್ಷ ಹುಲಿಕೆರೆ ಸಂಪತ್‌ಕುಮಾರ್, ಸದಸ್ಯರುಗಳಾದ ಮಂಜುನಾಥ್, ನಟರಾಜ್ ಯಾದವ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಹೆಚ್.ಜೆ.ಕಿರಣ್, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಎನ್.ಎಸ್.ಲಕ್ಷ್ಮಣ್, ಗೌಡಕಿ ಮಂಜು, ನಿವೃತ್ತ ಎಂಎಸ್ಐಎಲ್ ಅಧಿಕಾರಿ ಎನ್.ಡಿ.ಜಗದೀಶ್, ಗ್ಯಾರಂಟಿ ಯೋಜನೆ ಸಮಿತಿ ಸದಸ್ಯ ನಿಶ್ಚಲ್, ರಾಘವ್ ಟ್ರೇಡರ್ಸ್ ಮಾಲೀಕರಾದ ಚೇತನ್ ಶಾ. ಹರಿದ್ರನ್, ಮ್ಯಾನೇಜರ್ ಅಖಿಲ್, ವಿಷ್ಣು, ರಾಘವ್, ತೃಪ್ತಿ, ಗ್ರಾಪಂ ಸದಸ್ಯರಾದ ಎನ್.ಎಸ್.ಮಂಜುನಾಥ್, ಕೃಷ್ಣ, ಸರಸ್ವತಿ ಜಗದೀಶ್ ಇನ್ನಿತರರು ಹಾಜರಿದ್ದರು.

## ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸುವಲ್ಲಿಯೂ ವಿಫಲ: ಹೆಚ್.ಡಿ.ಕುಮಾರಸ್ವಾಮಿ ಆರೋಪ

# 7000 ಸರ್ಕಾರಿ ಶಾಲೆ ಮುಚ್ಚಲು ರಾಜ್ಯ ಸರ್ಕಾರ ಹುನ್ನಾರ

• ಪ್ರಜೋದಯ ವರದಿ

**ಬೆಂಗಳೂರು:** ವಿಲೀನ ಮತ್ತು ಪಬ್ಲಿಕ್ ಶಾಲೆ ಸ್ಥಾಪನೆ ನೆಪದಲ್ಲಿ ರಾಜ್ಯದಲ್ಲಿ 7,000 ಸರ್ಕಾರಿ ಶಾಲೆಗಳನ್ನು ಮುಚ್ಚಲು ರಾಜ್ಯ ಸರ್ಕಾರ ಹೊರಟಿದೆ. ವಿಪರ್ಯಾಸ ವೆಂದರೆ,700 ಪಬ್ಲಿಕ್ ಶಾಲೆಗಳಿಗೆ 7,000 ಸರ್ಕಾರಿ ಶಾಲೆಗಳಿಗೆ ಇತಿಶ್ರೀ ಹಾಡಲು ಹೊರಟಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಆರೋಪಿಸಿದ್ದಾರೆ.



ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ವ್ಯವಸ್ಥೆ ಬೇರುಸಹಿತ ಸರ್ವನಾಶವಾಗಿದೆ. ಸುಸಜ್ಜಿತ ಕಟ್ಟಡ, ಶೌಚಾಲಯ, ಕ್ರೀಡಾಂಗಣ, ಗ್ರಂಥಾಲಯ, ಮಕ್ಕಳಿಗೆ ಸಮವಸ್ತ್ರ, ಪುಸ್ತಕ ಒದಗಿಸಲಾಗದ ಕೈಲಾಗದ ಸರ್ಕಾರವು ಈಗ ಜವಾಬ್ದಾರಿಯಿಂದ ಪಾರಾಗಲು ಸಲೀಸು ಮಾರ್ಗ ಕಂಡುಕೊಂಡಿದೆ ಎಂದು ಟೀಕಿಸಿದ್ದಾರೆ.

ಆಘಾತಕಾರಿ ಸಂಗತಿ ಎಂದರೆ, ಶೇ.10ಕ್ಕಿಂತ ಕಡಿಮೆ ಹಾಜರಾತಿಯುಳ್ಳ 5,000 ಶಾಲೆ, ಶೇ.50ಕ್ಕೂ ಕಡಿಮೆ ಹಾಜರಾತಿ ಹೊಂದಿರುವ 25,000 ಶಾಲೆಗಳಿಗೆ ಶಾಶ್ವತವಾಗಿ ಬೀಗ ಜಡಿಯಲು ಸರ್ಕಾರ ಮುಂದಾಗಿರುವುದು ದುರದೃಷ್ಟಕರ ಎಂದಿದ್ದಾರೆ.

ಮಕ್ಕಳು ಸರ್ಕಾರಿ ಶಾಲೆಗಳಿಗೆ ಏಕೆ ಬರುತ್ತಿಲ್ಲ? ಎನ್ನುವುದಕ್ಕೆ ಕಾರಣ ಪತ್ತೆಹಚ್ಚಿ ಪರಿಹಾರ ಕಂಡುಕೊಳ್ಳುವ ಬದಲು, ಗ್ರಾಮೀಣ ಭಾಗದ ಬಡ ಮಕ್ಕಳೇ ಹೆಚ್ಚಾಗಿ ವಿದ್ಯಾಭ್ಯಾಸ ಮಾಡುವ ಸರ್ಕಾರಿ ಶಾಲೆಗಳನ್ನು ವ್ಯವಸ್ಥಿತವಾಗಿ ಮುಗಿಸಿ ಇಡೀ ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ವ್ಯವಸ್ಥೆಯನ್ನೇ ಬುಡಮೇಲು ಮಾಡಿ ಖಾಸಗಿಯವರಿಗೆ ಧಾರೆ ಎರೆದು ಶಿಕ್ಷಣ ವ್ಯಾಪಾರೀಕರಣಕ್ಕೆ ಮತ್ತಷ್ಟು ಶಕ್ತಿ ಉತ್ತೇಜನ ನೀಡುವುದು ಕಾಂಗ್ರೆಸ್ ಸರ್ಕಾರದ ದುರುದ್ದೇಶ ಆಗಿದೆ ಎಂದು ಅವರು ಆಪಾದಿಸಿದ್ದಾರೆ.

ರಾಜ್ಯದಲ್ಲಿ 60,000 ಶಿಕ್ಷಕರ ಕೊರತೆ ಇದೆ. ಕೆಲ ದಿನಗಳಲ್ಲಿಯೇ 6,000 ಶಿಕ್ಷಕರು ನಿವೃತ್ತರಾಗುತ್ತಿದ್ದಾರೆ. ಖಾಲಿ ಹುದ್ದೆಗಳನ್ನು ನೇಮಕ ಮಾಡುವ ಬದಲಿಗೆ ಸರ್ಕಾರ ಶಿಕ್ಷಣ ವ್ಯವಸ್ಥೆಗೆ ಶಿಕ್ಷೆ ವಿಧಿಸುವ ದುಷ್ಕೃತ್ಯಕ್ಕೆ ಕೈ ಹಾಕಿದೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ.

## ಕರ್ನಾಟಕದಲ್ಲೂ ಮುಂದೆ ಬಿಹಾರದ್ದೇ ಫಲಿತಾಂಶ

ಬಿಹಾರದಲ್ಲಿ ಎನ್ ಡಿಎ ಮೈತ್ರಿಕೂಟದ ಗೆಲುವು ಖಚಿತವಾಗುತ್ತಿದ್ದಂತೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮಾತನಾಡಿದ್ದು, ಕರ್ನಾಟಕದಲ್ಲಿಯೂ ಮುಂದೆ ಇದೇ ರೀತಿ ಫಲಿತಾಂಶ ಹೊರಬೀಳಲಿದೆ ಎಂದಿದ್ದಾರೆ. ನವದೆಹಲಿಯಲ್ಲಿ ಮಾತನಾಡಿದ ಕುಮಾರಸ್ವಾಮಿ, ಬಿಹಾರ ಚುನಾವಣೆಯ ಇಂದಿನ ಫಲಿತಾಂಶ 2028ರಲ್ಲಿ ರಾಜ್ಯದಲ್ಲಿ ಮರುಕಳಿಸಲಿದೆ. ಬಿಜೆಪಿ-ಜೆಡಿಎಸ್ ಮೈತ್ರಿ ಮುಂದಿನ ಗೆಲುವಿಗೆ ಬುನಾದಿ ಹಾಕಿದೆ ಎಂದು ಹೇಳಿದರು. ಬಿಹಾರದಲ್ಲಿ ಎನ್ ಡಿಎಗೆ ಸಿಕ್ಕ ಗೆಲುವು ಬಿಜೆಪಿಯಲ್ಲಿ ಉತ್ಸಾ ಹ ಹೆಚ್ಚಿಸಿದೆ ಎಂದರು. ಬಿಹಾರದಲ್ಲಿ ಕಾಂಗ್ರೆಸ್ ಹೆಸರಿಲ್ಲದಂತಾಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದು ಎರಡುವರೆ ವರ್ಷಗಳು ಕಳೆದರೂ ಯಾವುದೇ ಅಭಿವೃದ್ಧಿ ಕೆಲಸ ಮಾಡುತ್ತಿಲ್ಲ. ಈಗಲೇ ಸಿದ್ದರಾಮಯ್ಯ ಸರ್ಕಾರದ ವಿರುದ್ಧ ಆಡಳಿತ ವಿರೋಧಿ ಅಲೆ ವ್ಯಕ್ತವಾಗುತ್ತಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಆಡಳಿತಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಭವಿಷ್ಯ ನುಡಿದರು. ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆ ಮಾತನಾಡಿ, ಕಬ್ಬು ಬೆಳೆಗಾರರ ಸಂಕಷ್ಟ ಬಿಗಡಾಯಿಸಿದೆ. ಮುಧೋಳದ ಸಕ್ಕರೆ ಕಾರ್ಖಾನೆಯ ಯಾರ್ಡ್‌ನಲ್ಲಿ ನಿಂತಿದ್ದ ಕಬ್ಬು ತುಂಬಿದ್ದ ಟ್ರಾಕ್ಟರುಗಳು ಬೆಂಕಿಗೆ ಆಹುತಿ ಆಗಿರುವುದು ನನಗೆ ತೀವ್ರ ದಿಗ್ಭ್ರಮೆ ಉಂಟು ಮಾಡಿದೆ. ಕಾಂಗ್ರೆಸ್ ಸರ್ಕಾರದ ವೈಫಲ್ಯಕ್ಕೆ ಇದು ಸ್ಪಷ್ಟ ನಿದರ್ಶನ ಎಂದು ಟೀಕಿಸಿದರು.

# 10 ಪದಕ ಗೆದ್ದ ಜಿಮ್ನಾಸ್ಟಿಕ್ ಅಕಾಡೆಮಿ ಮಕ್ಕಳು



• ಪ್ರಜೋದಯ ವರದಿ

**ಹಾಸನ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮತ್ತು ಕರ್ನಾಟಕ ಕ್ರೀಡಾ ಪ್ರಾಧಿಕಾರ ಹಾಗೂ ಕರ್ನಾಟಕ ಒಲಿಂಪಿಕ್ಸ್ ಸಂಸ್ಥೆ ವತಿಯಿಂದ ನ.3 ರಿಂದ 9 ರವರೆಗೆ, ಗೋಪಾಲನ್ ಸ್ಪೋರ್ಟ್ ಕಾಂಪ್ಲೆಕ್ಸ್ ಬೆಂಗಳೂರಿನಲ್ಲಿ ಆಯೋಜಿಸಲಾದ 4 ನೇ ಒಲಿಂಪಿಕ್ಸ್ ಮಿನಿ ಕರ್ನಾಟಕ ಕ್ರೀಡಾಕೂಟ 2025 ಕ್ರೀಡೆಯಲ್ಲಿ ಹಾಸನದ ಸ್ಟಾರ್ ಪ್ರೊ ಜಿಮ್ನಾಸ್ಟಿಕ್ ಅಕಾಡೆಮಿಯ ಮಕ್ಕಳು 10 ಪದಕಗಳನ್ನು ಗೆದ್ದು ಮಿಂಚಿದ್ದಾರೆ.

**ಆರ್ಟಿಸ್ಟಿಕ್ ಜಿಮ್ನಾಸ್ಟಿಕ್:** ಪವನ್ ಹೆಚ್.ಎಂ. ಪೋಮ್ಮೆಲ್ಹೊರ್ಸ್ ತೃತೀಯ ಸ್ಥಾನ, ಪವನ್ ಹೆಚ್.ಎಂ, ದ್ವಿತೀಯ ಸ್ಥಾನ, ಪವನ್ ಹೆಚ್.ಎಂ ಫ್ಲೋರ್ ಎಕ್ಸರ್ಸೈಜ್ ತೃತೀಯ ಸ್ಥಾನ, ಆಕ್ರೋಬೇಟಿಕ್ ಮೆನ್ಸ್‌ಪೇರ್ ಪವನ್ ಹೆಚ್.ಎಂ. ಹರ್ಷಗೌಡ ಪ್ರಥಮ ಸ್ಥಾನ, ವಿಮೆನ್ ಪೇರ್ ಸನಿಹ, ಮನ್ವಿತ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಏರೋಬಿಕ್ಸ್ ಜಿಮ್ನಾಸ್ಟಿಕ್ ಧನಿಕ ಅಶೋಕ್ ವಿಮೆನ್ ಸೋಲೋ ತೃತೀಯ ಸ್ಥಾನ, ಮಿಕ್ಸ್‌ಪೇರ್‌ನಲ್ಲಿ ಪವನ್ ಹೆಚ್.ಎಂ. ಮನ್ವಿತಾ ದ್ವಿತೀಯ ಸ್ಥಾನ ಪಡೆದಿದ್ದಾರೆ. ಈ ರಾಷ್ಟ್ರೀಯ ಕ್ರೀಡಾ ಪಟು ಸುಮಂತ್ ಎಂ.ಎಂ. ಅವರ ನೇತೃತ್ವದಲ್ಲಿ ತರಬೇತಿ ಪಡೆಯುತ್ತಿರುವ ಮಕ್ಕಳು ಅತ್ಯುತ್ತಮ ಸಾಧನೆಗೈದಿದ್ದಾರೆ.

ಎಲ್ಲಾ ಮಕ್ಕಳಿಗೂ ಪೋಷಕರು ಅಭಿನಂದಿಸಿದ್ದಾರೆ.

## ಮರಕ್ಕೆ ಬಸ್ ಡಿಕ್ಕಿ : 15ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ



• ಪ್ರಜೋದಯ ವರದಿ

**ಅರಸೀಕೆರೆ:** ಚಾಲಕ ನಿಯಂತ್ರಣ ತಪ್ಪಿದ ಕೆಎಸ್ ಆರ್‌ಟಿಸಿ ಬಸ್ ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ 15ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡ ದುರ ಘಟನೆ ತಾಲ್ಲೂಕಿನ ಗಿಜಿಹಳ್ಳಿ ಬಳಿ ಶುಕ್ರವಾರ ನಡೆದಿದೆ.

ಬಸ್ ಚಾಲಕ ಸೇರಿ ಗಾಯಾಳುಗಳ ಪೈಕಿ ಐವರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದ ಗಾಯಾಳುಗಳು ಸ್ಥಳೀಯ ಆಸ್ಪತ್ರೆಯಲ್ಲೇ ಚಿಕಿತ್ಸೆ ಪಡೆಯುತ್ತಿದ್ದಾರೆ. ಪುತ್ತೂರು ಡಿಪೋಗೆ ಸೇರಿದ ಬಸ್ ಅರಸೀಕೆರೆ ಮಾರ್ಗವಾಗಿ ಮಡಿಕೇರಿ ಕಡೆಗೆ ತೆರಳುತ್ತಿತ್ತು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬಸ್‌ನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ. ಮರಕ್ಕೆ ಅಪ್ಪಳಿಸಿದ್ದ ಬಸ್‌ನ್ನು ಜೆಸಿಬಿ ಬಳಸಿ ಬೇರ್ಪಡಿಸಲಾ ಯಿತು. ಅಪಘಾತ ನಂತರ ಕೆಲಹೊತ್ತು ಸಂಚಾರಕ್ಕೆ ಅಡ್ಡಿಯಾಗಿತ್ತು. ಸುದ್ದಿ ತಿಳಿಯುತ್ತಿದ್ದಂತೆಯೇ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

# ವೃಕ್ಷ ಮಾತೆಗೆ ಜಿಲ್ಲಾಡಳಿತದಿಂದ ಗೌರವ ಸಮರ್ಪಣೆ

• ಪ್ರಜೋದಯ ವರದಿ



**ಹಾಸನ:** ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರ ಪಾರ್ಥಿವ ಶರೀರಕ್ಕೆ ಜಿಲ್ಲಾಡಳಿತದ ವತಿಯಿಂದ ಶುಕ್ರವಾರ ರಾತ್ರಿ ಗೌರವ ಸಮರ್ಪಣೆ ಮಾಡಲಾಯಿತು.

ಬೆಂಗಳೂರಿನಿಂದ ಹಾಸನಕ್ಕೆ ಬಂದ ಪಾರ್ಥಿವ ಶರೀರವನ್ನು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತು.

ಆದಿಚುಂಚನಗಿರಿ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಸಂಸದ ಶ್ರೇಯಸ್ ಪಟೇಲ್, ಮಾಜಿ ಸಚಿವ ಎ.ಮಂಜು, ಶಾಸಕ ಹೆಚ್.ಪಿ.ಸ್ವರೂಪ್, ಮಹಾನಗರ ಪಾಲಿಕೆ ಮೇಯರ್ ಗಿರೀಶ್ ಚನ್ನವೀರಪ್ಪ, ಜಿಲ್ಲಾಧಿಕಾರಿ ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಅಪರ ಜಿಲ್ಲಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಬಾಬು, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್. ಕೆಂಚೇಗೌಡ, ಉಪಾಧ್ಯಕ್ಷರಾದ ಎನ್. ನಂಜುಂಡೇಗೌಡ, ಜಿ.ಪ್ರಕಾಶ್, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿ ಗೌರವ ಸಮರ್ಪಣೆ ಮಾಡಿದರು.

ಜಿಲ್ಲಾಧಿಕಾರಿ ಲತಾಕುಮಾರಿ ಅವರು ಮಾತನಾಡಿ, ವೃಕ್ಷ ಮಾತೆ ಸಾಲು ಮರದ ತಿಮ್ಮಕ್ಕ ಅವರು ಸಮಾಜಕ್ಕೆ ಅಮೋಘ ಸೇವೆಯನ್ನು ಸಲ್ಲಿಸಿದ್ದಾರೆ. ಶ್ರೀ ಹಾಸನಾಂಬ ದೇವಿ ದರ್ಶನಕ್ಕೆ ಆಗಮಿಸಿದ ಸಂದರ್ಭದಲ್ಲಿ ನಿಷ್ಕಲ್ಮಶ ಮನಸ್ಸಿನ ಮಾತೆಯಿಂದ ತಮಗೆ ಆಶೀರ್ವಾದ ದೊರೆತಿದ್ದನ್ನು ನೆನಪು ಮಾಡಿಕೊಂಡು ಹಿರಿಯ ಚೇತನದ ಬಗ್ಗೆ ಮೆಲುಕು ಹಾಕಿದರಲ್ಲದೆ ಅವರ ದರ್ಶನ ಭಾಗ್ಯ ದೊರೆತ್ತಿದ್ದು ಪುಣ್ಯ ಎಂದು ತಿಳಿಸಿದರು.

# ತಮಿಳುನಾಡು ಅರ್ಜಿ ವಜಾ: ಕಾಂಗ್ರೆಸ್ ಸಂಭ್ರಮ

• ಪ್ರಜೋದಯ ವರದಿ



**ಹಾಸನ:** ಮೇಕೆದಾಟು ಯೋಜನೆ ವಿರೋಧಿಸಿ ತಮಿಳುನಾಡು ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಶುಕ್ರವಾರ ನಗರದಲ್ಲಿ ಸಂಭ್ರಮಾಚರಿಸಿದರು.

ಬಿ.ಎಂ. ರಸ್ತೆಯಲ್ಲಿರುವ ಪಕ್ಷದ ಕಚೇರಿ ಎದುರು ಜಮಾಯಿಸಿದ ಕಾರ್ಯಕರ್ತರು ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು. ಕೆಪಿಸಿಸಿ ಸದಸ್ಯ ಹೆಚ್.ಕೆ.ಮಹೇಶ್ ಅವರು ಮಾತನಾಡಿ, ಮೇಕೆದಾಟು ಯೋಜನೆ ವಿಚಾರದಲ್ಲಿ ಸುಪ್ರೀಂ ಕೋರ್ಟ್ ನಲ್ಲಿ ದೊಡ್ಡ ಗೆಲುವು ಸಿಕ್ಕಿದೆ. ಯೋಜನೆ ಗೆ 7 ವರ್ಷಗಳಿಂದ ಅಡ್ಡಗಾಲು ಹಾಕುತ್ತಿದ್ದ ತಮಿ ಳು ನಾಡಿಗೆ ಭಾರೀ ಮುಖಭಂಗವಾಗಿದೆ. ಯೋಜನೆ ಸಾಕಾರಗೊಳಿಸುವ ನಿಟ್ಟಿನಲ್ಲಿ ಕರ್ನಾಟಕಕ್ಕೆ ಮೊದಲ ಜಯ ಸಿಕ್ಕಂತಾಗಿದೆ ಎಂದರು.

ಮೇಕೆದಾಟು ವಿಚಾರದಲ್ಲಿ ಮಧ್ಯ ಪ್ರವೇಶಿ ಸುವುದಿಲ್ಲವೆಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಪೀಠ ಹೇಳಿದೆ. ಮೇಕೆದಾಟು ಯೋಜನೆ ಇನ್ನೂ ಆರಂಭಿಕ ಹಂತದಲ್ಲಿದ್ದು, ನಿರ್ಮಾಣ ಕಾಮಗಾರಿ ಪ್ರಾರಂಭವಾಗಿಲ್ಲ. ಈ ಯೋಜನೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಜಲ ಆಯೋಗದಂತಹ ತಜ್ಞ ಸಂಸ್ಥೆಗಳ ಪರಿಶೀಲನೆಯಲ್ಲಿದೆ ಎಂದು ಹೇಳಿದರು. ಪಕ್ಷದ ಮುಖಂಡರಾದ ಬನವಾಸೆ ರಂಗಸ್ವಾಮಿ, ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ದೇವರಾಜೇಗೌಡ, ರಘು ದಾಸರ ಕೊಪ್ಪಲು, ವೆಂಕಟೇಶಗೌಡ, ಆರೀಫ್ ಇದ್ದರು.

# ಸಾಲುಮರದ ತಿಮ್ಮಕ್ಕ ನಿಧನಕ್ಕೆ ಸಂತಾಪ

• ಪ್ರಜೋದಯ ವರದಿ



**ಶ್ರವಣಬೆಳಗೊಳ:** ವೃಕ್ಷಮಾತೆ ಎಂದೇ ಮನೆ ಮಾತಾಗಿದ್ದ ಸಾಲುಮರದ ತಿಮ್ಮಕ್ಕ ಅವರ ನಿಧನದಿಂದ ಕನ್ನಡ ನಾಡು ಪರಿಸರ ರಾಯಭಾರಿಯೊಬ್ಬರನ್ನು ಕಳೆದುಕೊಂಡಂತಾಗಿದೆ ಎಂದು ಶ್ರವಣಬೆಳಗೊಳದ ಶ್ರೀ ದಿಗಂಬರ ಜೈನ ಮಹಾ ಸಂಸ್ಥಾನ ಮಠದ ಸ್ವಸ್ತಿ ಶ್ರೀ ಚಾರುಕೀರ್ತಿ ಪಂಡಿತಾ ಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಮಹಾ ಸ್ವಾಮೀಜಿಯವರು ಸಂತಾಪ ಸೂಚಿಸಿದ್ದಾರೆ.

ಪದ್ಮಶ್ರೀ ಸಾಲುಮರದ ತಿಮ್ಮಕ್ಕನವರು ಮಕ್ಕಳಿಲ್ಲದ ಕಾರಣಕ್ಕೆ ಸಸಿಗಳನ್ನೇ ಮಕ್ಕಳಂತೆ ಬೆಳೆಸಿ, 385 ಆಲದ ಮರಗಳು ಸೇರಿ 8,000ಕ್ಕೂ ಹೆಚ್ಚು ಮರಗಳನ್ನು ಬೆಳೆಸಿ ಪರಿಸರ ಸಂರಕ್ಷಣೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದ ವೃಕ್ಷಮಾತೆಯನ್ನು ಕಳೆದುಕೊಂಡು ಪರಿಸರ ಲೋಕ ಅನಾಥವಾಗಿದೆ. ಗ್ರಾಮಾಂತರ ಪ್ರದೇಶದ ತಿಮ್ಮಕ್ಕನವರು ಗಿಡಮರಗಳನ್ನು ಮಕ್ಕಳೆಂದು ಭಾವಿಸಿ, ನೀರು ಎರೆದು ಅವುಗಳನ್ನು ಪೋಷಿಸಿ ಸಾವಿರಾರು ಮರಗಳನ್ನು ಬೆಳೆಸುವ ಮುಖೇನ ವಿಶ್ವಕ್ಕೆ ಮಾದರಿಯಾಗಿದ್ದರು. ಸ್ವಾರ್ಥ, ಫಲಾಪೇಕ್ಷೆಯಿಲ್ಲದೆ ಪರಿಸರ ಮತ್ತು ಜೀವಸಂಕುಲವನ್ನು ಸಂರಕ್ಷಿಸಿದ ಮಾತೆ ಸಾಲುಮರದ ತಿಮ್ಮಕ್ಕನವರ ಕೊಡುಗೆ ಅವಿಸ್ಮರಣೀಯ. ಅವರ ಅಗಲಿಕೆಯು ನಾಡಿಗೆ ಮತ್ತು ಪರಿಸರ ಲೋಕಕ್ಕೆ ತುಂಬಲಾಗದ ನಷ್ಟವಾಗಿದೆ ಎಂದರು.

ತಿಮ್ಮಕ್ಕನವರು ಮಾಗಡಿ ತಾಲ್ಲೂಕಿನಲ್ಲಿ 4.5 ಕಿ.ಮೀ ಉದ್ದಕ್ಕೂ 385 ಆಲದ ಮರಗಳನ್ನು ನೆಟ್ಟು ಬೆಳೆಸುವ ಮೂಲಕ ಪರಿಸರ ಪ್ರೇಮವನ್ನು ಮೆರೆದಿದ್ದಾರೆ. ಅಕ್ಷರಸ್ಥರಲ್ಲದಿದ್ದರೂ, ಪರಿಸರ ಸಂರಕ್ಷಣೆಯಲ್ಲಿ ಅವರು ಮಾಡಿದ ಸಾಧನೆ ಎಲ್ಲರಿಗೂ ಮಾದರಿಯಾಗಿದೆ. ಸಾವಿರಾರು ಗಿಡಗಳನ್ನು ನೆಟ್ಟು, ಅವುಗಳನ್ನು ಮಕ್ಕಳಂತೆ ಸಲಹಿದ ತಿಮ್ಮಕ್ಕನವರು ತಮ್ಮ ಬಹುಪಾಲು ಜೀವಿತ ಕಾಲವನ್ನು ಪರಿಸರ ಸಂರಕ್ಷಣೆಗಾಗಿ ಮುಡಿಪಾಗಿಟ್ಟವರು. ಇಂದು ತಿಮ್ಮಕ್ಕನವರು ನಮ್ಮನ್ನು ಅಗಲಿದರೂ ಅವರ ಪರಿಸರ ಪ್ರೇಮ ಅವರನ್ನು ಚಿರಸ್ಥಾಯಿಯಾಗಿದೆ. ಅವರ ಈ ಅಪೂರ್ವ ಸೇವೆಗೆ ಪದ್ಮಶ್ರೀ ಪ್ರಶಸ್ತಿ ಸೇರಿ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಗೌರವಗಳು ಸಂದಿವೆ ಎಂದರು ಹೇಳಿದರು.

ಅವರ ಈ ಮಹತ್ತರ ಕಾರ್ಯವನ್ನು ಗುರುತಿಸಿ 2019 ರಲ್ಲಿ ಭಾರತ ಸರ್ಕಾರವು ದೇಶದ ನಾಲ್ಕನೇ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಿತು. 1995ರಲ್ಲಿ ಅವರಿಗೆ ರಾಷ್ಟ್ರೀಯ ನಾಗರಿಕ ಪ್ರಶಸ್ತಿ ಸಹ ಲಭಿಸಿತು. ಅಮೇರಿಕಾದ ಲಾಸ್ ಏಂಜಲೀಸ್ ಮತ್ತು ಓಕ್‌ಲ್ಯಾಂಡ್‌ನಲ್ಲಿರುವ ಪರಿಸರ ಶಿಕ್ಷಣ ಸಂಸ್ಥೆಗೆ ಅವರ ಹೆಸರಿಡಲಾಗಿದೆ. ಇದು ಅವರ ಅಂತರರಾಷ್ಟ್ರೀಯ ಮಟ್ಟದ ಗುರುತಿಸುವಿಕೆಗೆ ಸಾಕ್ಷಿಯಾಗಿದೆ. ಅದಲ್ಲದೆ ವೃಕ್ಷ ಮಿತ್ರ ಪ್ರಶಸ್ತಿ, ವೀರಚಕ್ರ ಪ್ರಶಸ್ತಿ, ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿ, ಕರ್ನಾಟಕ ಕಲ್ಪವಲ್ಲಿ ಪ್ರಶಸ್ತಿ, ಗಾಡ್‌ಫ್ರಿ ಫಿಲಿಪ್ಸ್ ಧೀರತೆ ಪ್ರಶಸ್ತಿ ಹೀಗೆ ಹಲವಾರು ಪ್ರಶಸ್ತಿಗಳು ಅವರ ಸಾಧನೆಗೆ ಸಂದಿವೆ. ಕರ್ನಾಟಕ ಸರ್ಕಾರವು ಅವರನ್ನು ಪರಿಸರ ರಾಯಭಾರಿ ಎಂದು ಘೋಷಿಸಿ, ಕ್ಯಾಬಿನೆಟ್ ದರ್ಜೆಯ ಸ್ಥಾನಮಾನ ನೀಡಿ ಗೌರವಿಸಿತ್ತು.

ಪರಿಸರಕ್ಕಾಗಿ ತಮ್ಮ ಇಡೀ ಬದುಕನ್ನೇ ಮುಡಿಪಿಟ್ಟು ಪ್ರಕೃತಿಗಾಗಿಯೇ ಬದುಕಿ ಬಾಳಿದ ಸಾಲುಮರದ ತಿಮ್ಮಕ್ಕ ಅವರು ನಾಡಿಗೆ ನೀಡಿರುವ ಕೊಡುಗೆ ಅಜರಾಮರ. ತಿಮ್ಮಕ್ಕನವರ ಜೀವನ ಹಾಗೂ ಅವರ ಪರಿಸರ ಪ್ರೇಮವು ಸಮಾಜಕ್ಕೆ, ಯುವ ಸಮುದಾಯಕ್ಕೆ ಹಾಗೂ ಸಮಸ್ತ ಮಾನವ ಕುಲಕ್ಕೆ ಪ್ರೇರಣೆಯಾಗಲಿ. ಅಗಲಿದ ಮಹಾ ಚೇತನಕ್ಕೆ ಭಗವಂತ ಚಿರಶಾಂತಿ ದೊರಕಿಸಿ, ಅವರ ಕುಟುಂಬ ವರ್ಗಕ್ಕೆ ಹಾಗೂ ಅವರ ಅಭಿಮಾನಿಗಳಿಗೆ ದುಃಖವನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಭಗವಾನ್ ಶ್ರೀ ಬಾಹುಬಲಿ ಸ್ವಾಮಿಯವರಲ್ಲಿ ಪ್ರಾರ್ಥಿಸುತ್ತೇವೆ ಎಂದು ತಿಳಿಸಿದರು.

## ಬಿಜೆಪಿ ನಾಯಕರಿಗೆ ಅವಮಾನ: ಪೊಲೀಸರಿಗೆ ದೂರು

**ಹಾಸನ:** ಪೊಲೀಸ್ ಇಲಾಖೆ ನೌಕರನೊಬ್ಬ ತನ್ನ ವಾಟ್ಸಾಪ್ ಸ್ಟೇಟಸ್‌ನಲ್ಲಿ ಬಿಜೆಪಿ ನಾಯಕರ ವಿರುದ್ಧ ಆಕ್ಷೇಪಾರ್ಹ ಹಾಗು ಅವಹೇಳನಕಾರಿ ಮಾಹಿತಿ ಹಂಚಿಕೊಂಡಿದ್ದು, ಆತನ ವಿರುದ್ಧ ಕ್ರಮ ಜರುಗಿಸಬೇಕೆಂದು ಬಿಜೆಪಿ ಮುಖಂಡ ಎಸ್.ಕೆ.ವೇಣುಗೋಪಾಲ್ ಸಿಇಎನ್ ಠಾಣೆಗೆ ದೂರು ನೀಡಿದ್ದಾರೆ.

ಡಿಸಿಆರ್‌ಇ ಕಾರು ಚಾಲಕಮುಷೀರ್ ಎಂಬುವವರ ವಿರುದ್ಧ ದೂರು ನೀಡಲಾಗಿದೆ. ನ.10ರಂದು ಮುಷೀರ್ ಅವರು ತಮ್ಮ ವಾಟ್ಸಾಪ್ ಸ್ಟೇಟಸ್‌ನಲ್ಲಿ ಬಿಜೆಪಿ ನಾಯಕರ ಬಗ್ಗೆ ಆಕ್ಷೇಪಾರ್ಹ ಭಾವಚಿತ್ರಗಳೊಂದಿಗೆ ಅವಹೇಳನಕಾರಿ ಸಂದೇಶಗಳನ್ನು ಪೋಸ್ಟ್ ಮಾಡಿದ್ದಾರೆಂದು ಆರೋಪಿಸಿದ್ದಾರೆ.

ಮುಷೀರ್ ಅವರು ಸರ್ಕಾರಿ ನೌಕರರಾಗಿ ಯಾವುದೇ ಪಕ್ಷ ಅಥವಾ ಸಂಘಟನೆಯ ಪರ ಅಥವಾ ವಿರೋಧವಾಗಿ ಸಂದೇಶಗಳನ್ನು ಹಾಕುವುದು ಕಾನೂನು ಬಾಹಿರ. ಇದು ಸರ್ಕಾರಿ ಸೇವಾ ನಿಯಮಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಈ ಅಂಶ ಗೊತ್ತಿದ್ದರೂ ಕೂಡ ಆಕ್ಷೇಪಾರ್ಹ ಮತ್ತು ಅವಹೇಳನಕಾರಿ ಪೋಸ್ಟ್‌ಗಳನ್ನು ಹಾಕಿರುವ ಮುಷೀರ್ ನಡೆ ಖಂಡನೀಯವೆಂದು ಹೇಳಿದ್ದಾರೆ. ಸರ್ಕಾರಿ ನಿಯಮಗಳನ್ನು ಉಲ್ಲಂಘಿಸಿ ರುವ ಆರೋಪಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.

### ಸಿಐಟಿಯು ರಾಜ್ಯ ಸಮ್ಮೇಳನದಲ್ಲಿ ತೀರ್ಮಾನ | ರಾಜ್ಯಾಧ್ಯಕ್ಷೆ ಎಸ್.ವರಲಕ್ಷ್ಮೀ

# 36 ಸಾವಿರ ರೂ. ಕನಿಷ್ಠ ವೇತನ, ಖಾಯಂ ನೌಕರಿಗೆ ನಿರ್ಣಯ

• ಪ್ರಜೋದಯ ವರದಿ



**ಹಾಸನ:** ಸಿಐಟಿಯು ರಾಜ್ಯ ಸಮ್ಮೇಳನದಲ್ಲಿ ಮಾಸಿಕ ಕನಿಷ್ಠ ವೇತನವನ್ನು 36 ಸಾವಿರ ರೂ.ಗೆ ಪರಿಷ್ಕರಿಸಬೇಕು ಹಾಗು ಗುತ್ತಿಗೆ-ಹೊರಗುತ್ತಿಗೆ ಪದ್ಧತಿಯಲ್ಲಿ ದುಡಿಯುತ್ತಿರುವ ಎಲ್ಲಾ ಕಾರ್ಮಿಕರನ್ನು ಖಾಯಂಗೊಳಿಸಬೇಕೆಂಬ ನಿರ್ಣಯ ಕೈಗೊಂಡು, ಬೇಡಿಕೆಯನ್ನು ಸರ್ಕಾರದ ಮುಂದಿಡಲಾಗಿದೆ ಎಂದು ಸಿಐಟಿಯು ರಾಜ್ಯಾಧ್ಯಕ್ಷೆ ಎಸ್. ವರಲಕ್ಷ್ಮೀ ಅವರು ತಿಳಿಸಿದರು.

ನಗರದ ಅಂಬೇಡ್ಕರ್ ಭವನ ಆವರಣದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಲಕ್ಷಾಂತರ ಕಾರ್ಮಿಕರ ಭವಿಷ್ಯದ ಮೇಲೆ ನೇರ ಪರಿಣಾಮ ಬೀರಬಲ್ಲ ಎರಡು ನಿರ್ಣಾಯಕ ನಿರ್ಣಯಗಳನ್ನು ಅಂಗೀಕರಿಸಿದೆ. ಈ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ವಿಫಲವಾದರೆ, ರಾಜ್ಯಾದ್ಯಂತ ತೀವ್ರ ಸ್ವರೂಪದ ಹೋರಾಟ ಆರಂಭಿಸುವುದಾಗಿ ಎಚ್ಚರಿಸಿದರು.

ಸಮ್ಮೇಳನದ ಕಾರ್ಯಸೂಚಿಯು ಕರ್ನಾಟಕದ ಸುಮಾರು 1.5 ಕೋಟಿ ಕಾರ್ಮಿಕರು ಎದುರಿಸುತ್ತಿರುವ ದೀರ್ಘ ಕಾಲೀನ ಆರ್ಥಿಕ ಸಂಕಷ್ಟ ಮತ್ತು ಉದ್ಯೋಗ ಅಭದ್ರತೆಯ ಬಿಕ್ಕಟ್ಟುಗಳನ್ನು ಪರಿಹರಿಸುವ ಗುರಿಯನ್ನು ಹೊಂದಿರುವ ಎರಡು ಪರಿವರ್ತನಾಶೀಲ ನಿರ್ಣಯಗಳ ಮೇಲೆ ಕೇಂದ್ರೀಕೃತವಾಗಿದೆ. ಈ ಬೇಡಿಕೆಗಳು ರಾಜ್ಯದ ಪ್ರಸ್ತುತ ಕಾರ್ಮಿಕ ನೀತಿಗಳಿಗೆ ಮೂಲಭೂತವಾದ ಸವಾಲನ್ನು ಒಡ್ಡಿವೆ ಎಂದು ತಿಳಿಸಿದರು.

ಏಳು ವರ್ಷಗಳಿಂದ ಪರಿಷ್ಕರಣೆಯಾಗದೆ ಸುಮಾರು 1.5 ಕೋಟಿ ಕಾರ್ಮಿಕರು ಸಂಕಷ್ಟದಲ್ಲಿದ್ದಾರೆ. ಗುತ್ತಿಗೆ ಕಾರ್ಮಿಕರ ಖಾಯಂ ಸರ್ಕಾರಿ ಮತ್ತು ಖಾಸಗಿ ವಲಯಗಳಲ್ಲಿನ ಶೇ.50-60ರಷ್ಟು ಗುತ್ತಿಗೆ ಮತ್ತು ಹೊರಗುತ್ತಿಗೆ ಕಾರ್ಮಿಕರನ್ನು ಶೋಷಣೆಯಿಂದ ಮುಕ್ತಗೊಳಿಸಿ, ವಿಶೇಷ ಕಾನೂನಿನ ಮೂಲಕ ಖಾಯಂಗೊಳಿಸಬೇಕೆಂದು ಒತ್ತಾಯಿಸಿದರು.

ಸಿಐಟಿಯು ಮಂಡಿಸಿರುವ ಬೇಡಿಕೆಗಳು ಏಕಾಏಕಿ ಮಾಡಿದ ಆಗ್ರಹಗಳಲ್ಲ, ಬದಲಾಗಿ ಹಲವು ವರ್ಷಗಳಿಂದ ನಡೆಯುತ್ತಿರುವ ವೇತನ ದಮನ ಮತ್ತು ಉದ್ಯೋಗ ಭದ್ರತೆಯ ವ್ಯವಸ್ಥಿತ ನಾಶದ ನೇರ ಪರಿಣಾಮವಾಗಿದೆ. ಈ ವಿಭಾಗವು ಸಂಘಟನೆಯು ಮುಂದಿಟ್ಟಿರುವ ನಿರ್ದಿಷ್ಟ ವಾದಗಳನ್ನು ವಿಭಜಿಸಿ, ವಿವಿಧ ವಲಯಗಳ ಕಾರ್ಮಿಕರು ಎದುರಿಸುತ್ತಿರುವ ವಾಸ್ತವಗಳನ್ನು ಮತ್ತು ಸರ್ಕಾರದ ವಿಳಂಬ ನೀತಿಯನ್ನು ತಿಳಿಸುವ ಉದ್ದೇಶವಾಗಿದೆ ಎಂದು ಹೇಳಿದರು.

ಸರ್ಕಾರವು ಕರಡು ಅಧಿಸೂಚನೆಯಲ್ಲಿ ಕೌಶಲ್ಯ ಮತ್ತು ವಲಯಗಳ ಆಧಾರದ ಮೇಲೆ 23,000 ರೂ.ರಿಂದ 30,000ರೂ.ವರೆಗೆ ವೇತನವನ್ನು ಪ್ರಸ್ತಾಪಿಸಿದೆ. ಆದರೆ, ಸಿಐಟಿಯು ಇದನ್ನು ತಿರಸ್ಕರಿಸಿದ್ದು, ತಮ್ಮ ಲೆಕ್ಕಾಚಾರದ ಪ್ರಕಾರ 36,000 ವೇತನ ನ್ಯಾಯಸಮ್ಮತವಾಗಿದೆ. ಕನಿಷ್ಠ ವೇತನವನ್ನು ಹೆಚ್ಚಿಸಿದರೆ ರಾಜ್ಯಕ್ಕೆ ಬಂಡವಾಳ ಹೂಡಿಕೆ ಬರುವುದಿಲ್ಲ. ಕಾರ್ಮಿಕನಿಗೆ ಬದುಕಲು ಬೇಕಾದ ವೇತನ ನೀಡಿದಾಗ ಮಾತ್ರ ಮಾಲೀಕರ ಲಾಭವೂ ಹೆಚ್ಚಾಗುತ್ತದೆ. ಹಸಿದ ಹೊಟ್ಟೆಯಲ್ಲಿ ಕಾರ್ಮಿಕರಿಂದ ಉತ್ತಮ ಉತ್ಪಾದನೆ ಸಾಧ್ಯವಿಲ್ಲವೆಂದು ತಿಳಿಸಿದರು.

**ಖಾಯಂ ಉದ್ಯೋಗದ ಕಣ್ಮರೆ**

ಗುತ್ತಿಗೆ, ಹೊರಗುತ್ತಿಗೆ, ನೀಮ್ ಮತ್ತು ನೆಟಾಪ್ ನಂತಹ ಖಾಯಂ ಅಲ್ಲದ ಉದ್ಯೋಗಗಳು ಆಕ್ರಮಿಸಿಕೊಳ್ಳುತ್ತಿವೆ. ಖಾಸಗಿ ಉತ್ಪಾದನಾ ವಲಯದಲ್ಲಿ ಶೇ.50ಕ್ಕಿಂತ ಹೆಚ್ಚು ಮತ್ತು ಸರ್ಕಾರಿ ಸೇವೆಗಳಲ್ಲಿ ಶೇ.60ಕ್ಕಿಂತ ಹೆಚ್ಚು ಕಾರ್ಮಿಕರು ಇಂತಹ ಅಸುರಕ್ಷಿತ ಉದ್ಯೋಗಗಳಲ್ಲೇ ದುಡಿಯುತ್ತಿದ್ದಾರೆ. ಇದರ ಪರಿಣಾಮವಾಗಿ, ಪ್ರತಿ ವರ್ಷಗುತ್ತಿಗೆ ನವೀಕರಣವಾಗುವುದೋ ಇಲ್ಲವೋ ಎಂಬ ಭಯ, ಶಾಸನಾತ್ಮಕ ಸೌಲಭ್ಯಗಳ ನಿರಾಕರಣೆ ಮತ್ತು ಹಕ್ಕುಗಳ ದಮನವನ್ನು ಕಾರ್ಮಿಕರು ಎದುರಿಸುತ್ತಿದ್ದಾರೆ ಹೀಗಾಗಿ ಉದ್ಯೋಗ್ಯ ಖಾಯಂಗೊಳಿಸಬೇಕೆಂದು ಒತ್ತಾಯಿಸಿದರು.

ಸಿಐಟಿಯು ಮುಖಂಡರಾದ ಉಮೇಶ್, ಯಮುನಾ, ಪುಷ್ಪ ಹಾಜರಿದ್ದರು.

**ಇಂದು ಬಹಿರಂಗ ಸಮಾವೇಶ**

ಸಮ್ಮೇಳನದ ಅಂತಿಮ ಶನಿವಾರ ಮಧ್ಯಾಹ್ನ 12 ಗಂಟೆಗೆ ಹೇಮಾವತಿ ಪ್ರತಿಮೆಯಿಂದ ಕಾರ್ಮಿಕರ ರ್‍ಯಾಲಿ ಆರಂಭವಾಗಲಿದೆ. ಕೆಂಪು ಸಮವಸ್ತ್ರ ಧರಿಸಿದ ಕಾರ್ಮಿಕರು ಮತ್ತು ಸಾಂಸ್ಕೃತಿಕ ಕಲಾತಂಡಗಳೊಂದಿಗೆ ಈ ಮೆರವಣಿಗೆಯು ಶಿಸ್ತುಬದ್ಧವಾಗಿ ನಡೆಯಲಿದೆ. ರ್‍ಯಾಲಿಯು ಜಿಲ್ಲಾಧಿ ಕಾರಿಗಳ ಕಚೇರಿಯ ಹಿಂಭಾಗದಲ್ಲಿ ಬಹಿರಂಗ ಸಮಾವೇಶದೊಂದಿಗೆ ಮುಕ್ತಾಯಗೊಳ್ಳಲಿದೆ ಎಂದು ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್ ಅವರು ತಿಳಿಸಿದರು.

## 5.5 ಕೋಟಿ ರೂ. ವಿವಿಧ ಕಾಮಗಾರಿಗೆ ಚಾಲನೆ



• ಪ್ರಜೋದಯ ವರದಿ

**ಹಾಸನ:** ನಗರದ ಡೇರಿ ವೃತ್ತದ ಬಳಿ 5.5 ಕೋಟಿ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಶುಕ್ರವಾರ ಶಾಸಕ ಹೆಚ್.ಪಿ.ಸ್ವರೂಪ್ ಅವರು ಭೂಮಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಡೇರಿ ವೃತ್ತದ ಬಳಿಯಿಂದ ಕಾಟೀಹಳ್ಳಿ ಕಮಾನುವರೆಗೆ 1.50 ಮೀ. ಅಗಲದ ಪಾದಚಾರಿ ಮಾರ್ಗ, ವರ್ತುಲ ಅಭಿವೃದ್ಧಿ ಕಾಮಗಾರಿ, ಡೇರಿ ವೃತ್ತದ ಬಳಿ ಮರು ಡಾಂಬರೀಕರಣ, ರಸ್ತೆ ಸುರಕ್ಷತಾ ದೃಷ್ಟಿಯಿಂದ ಅವಶ್ಯವಿರುವ ಇನ್ನಿತರೆ ಕಾಮಗಾರಿ ಗಳನ್ನು ಒಳಗೊಂಡಿದೆ ಎಂದು ತಿಳಿಸಿದರು.

ಹನುಮಂತನಗರದ ಬಳಿ 1.50 ಮೀಟರ್ ಅಗಲದ ಪಾದಚಾರಿ ಮಾರ್ಗ, 1.40 ಕಿ.ಮೀ. ಮರು ಡಾಂಬರೀಕರಣ ಹಾಗು ರಸ್ತೆ ಸುರಕ್ಷತಾ ದೃಷ್ಟಿಯಿಂದ ಅವಶ್ಯವಿರುವ ಇನ್ನಿತರೆ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿತು. ಈ ವೇಳೆ ಮೇಯರ್ ಗಿರೀಶ್ ಚನ್ನವೀರಪ್ಪ, ಜೆಡಿಎಸ್ ಮುಖಂಡರು, ಆಯಾ ಬಡಾವಣೆಗಳ ಮುಖಂಡರು, ಅಧಿಕಾರಿಗಳು ಉಪಸ್ಥಿತರಿದ್ದರು.

# ನಗರದಲ್ಲಿ ಪ್ರೀತಮ್‌ಗೌಡ ಹುಟ್ಟುಹಬ್ಬ ಆಚರಣೆ

• ಪ್ರಜೋದಯ ವರದಿ



**ಹಾಸನ:** ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಮಾಜಿ ಶಾಸಕ ಪ್ರೀತಮ್ ಜೆ.ಗೌಡ ಅವರ 44ನೇ ಹುಟ್ಟುಹಬ್ಬವನ್ನು ಶುಕ್ರವಾರ ನಗರದಲ್ಲಿ ಬಿಜೆಪಿ ಕಾರ್ಯಕರ್ತರು, ಅಭಿಮಾನಿಗಳು ಆಚರಿಸಿದರು.

ನಗರದ ಸೀತಾರಾಮಾಂಜನೇಯ ದೇವಾಲಯದಲ್ಲಿ ಬೆಳಿಗ್ಗೆ ಪಕ್ಷದ ಕಾರ್ಯಕರ್ತರು, ಮುಖಂಡರು ಹಾಗು ಅಭಿಮಾನಿಗಳು ಆಗಮಿಸಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ತಮ್ಮ ನಾಯಕರು ರಾಜಕೀಯವಾಗಿ ಇನ್ನೂ ಎತ್ತರಕ್ಕೆ ಬೆಳೆಯಲಿ ಎಂದು ಆಶಿಸಿದರು.

ಪ್ರೀತಮ್ ಗೌಡ ಅವರ ತಂದೆ-ತಾಯಿ, ಕುಟುಂಬದ ಸದಸ್ಯರು ಮತ್ತು ಪ್ರಮುಖ ಮುಖಂಡರ ಸಮ್ಮುಖದಲ್ಲಿ ವಿಶೇಷ ಪೂಜೆ ಬಳಿಕ ಸಿಹಿ ತಿನಿಸು ವಿತರಣೆ, ಪಟಾಕಿ ಸಿಡಿಸಿ ಸಂಭ್ರಮಿಸಲಾಯಿತು. ಹುಡಾ ಮಾಜಿ ಅಧ್ಯಕ್ಷ ಲಲಾಟ್ ಮೂರ್ತಿ, ಬಿಜೆಪಿ ನಗರಾಧ್ಯಕ್ಷ ಯೋಗೇಶ್‌ಗೌಡ, ಮುಖಂಡ ಶ್ರೀಕಾಂತ್ ಮಾಧ್ಯಮದೊಂದಿಗೆ ಮಾತನಾಡಿ, ಪ್ರೀತಮ್‌ಗೌಡ ಅವರ ಸೇವಾ ಮನೋಭಾವ, ದೃಢ ನಿಲುವು ಮತ್ತು ಅಭಿವೃದ್ಧಿ ದೃಷ್ಟಿಕೋನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ದೇವಾಲಯದಲ್ಲಿ ವಿಶೇಷ ಪೂಜೆ ಮಾಡುವುದು ನಮ್ಮ ಗೌರವ. ಅವರು ರಾಜಕೀಯವಾಗಿ ಮತ್ತಷ್ಟು ಶಕ್ತಿಯುತರಾಗಿ ರಾಜ್ಯ ಮಟ್ಟದಲ್ಲಿ ಪ್ರಮುಖ ಪಾತ್ರವಹಿಸಲಿ ಎಂದು ಎಲ್ಲರೂ ಪ್ರಾರ್ಥಿಸಿದ್ದೇವೆಂದು ಹೇಳಿದರು.

ಪ್ರೀತಮ್‌ಗೌಡ ಅವರು ಶಾಸಕ ಸ್ಥಾನದಲ್ಲಿದ್ದಾಗ ಮಾಡಿದ ಕೆಲಸಗಳು ಹಾಸನದ ಅಭಿವೃದ್ಧಿ ವೇಗ ಹೆಚ್ಚಿಸಿದ್ದವು. 2028ರಲ್ಲಿ ಅವರು ಮತ್ತೆ ಸ್ಪರ್ಧಿಸಿ ಶಾಸಕರಾಗಿ ತಾಲ್ಲೂಕು ಮತ್ತು ನಗರವನ್ನು ಮತ್ತಷ್ಟು ಪ್ರಗತಿ ಪಥದತ್ತ ಕೊಂಡೊಯ್ಯಲಿ ಎಂದು ಆಶಿಸಿದರು.

ಬಳಿಕ ಪೌರಕಾರ್ಮಿಕರು ಮತ್ತು ನಗರದ ವಾಹನ ಚಾಲಕರಿಗೆ ಸಮವಸ್ತ್ರ ವಿತರಣೆ ಮಾಡಿ, ಗೌರವ ಸೂಚಿಸಲಾಯಿತು. ವಿವಿಧೆಡೆ ಅನ್ನದಾಸೋಹ ಹಮ್ಮಿಕೊಳ್ಳಲಾಗಿತ್ತು. ಬೈಕ್ ರ್‍ಯಾಲಿ ಮೂಲಕ ಬಂದ ಯುವಕರ ತಂಡಗಳು, ಮಹಿಳಾ ಕಾರ್ಯಕರ್ತರು, ಅಭಿಮಾನಿಗಳು ಪ್ರೀತಮ್ ಗೌಡ ಅವರ ಕಟೌಟ್‌ಗಳಿಗೆ ಹೂವಿನ ಅಲಂಕಾರ ಮಾಡಿ, ಸಿಹಿ ಹಂಚಿ ಹರ್ಷ ವ್ಯಕ್ತಪಡಿಸಿದರು.

## ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್ ಸೇರಿದ ಡಿಂಪನಾ

• ಪ್ರಜೋದಯ ವರದಿ



**ಹಾಸನ:** ಪುಟ್ಟ ಚಿತ್ರಕಲಾವಿದೆ ಡಿಂಪನಾ ಎಸ್.ದೇಸಾಯಿ, ಕೇವಲ ಮೂರು ವರ್ಷದಲ್ಲೇ ಚಿತ್ರಕಲೆಯ ಅದ್ಭುತ ಕೌಶಲ್ಯಕ್ಕಾಗಿ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲಾಗುವ ಅಪರೂಪದ ಗೌರವಕ್ಕೆ ಪಾತ್ರರಾಗಿದ್ದಾಳೆಂದು ಹಿರಿಯ ಕಲಾವಿದ ಬಿ.ಎಸ್.ದೇಸಾಯಿ ಅವರು ತಿಳಿಸಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿಂಪನಾ ಈಗಾಗಲೇ 350ಕ್ಕೂ ಹೆಚ್ಚು ಚಿತ್ರಗಳನ್ನು ರಚಿಸಿದ್ದಾಳೆ. ಕೇವಲ 3 ವರ್ಷ ನಾಲ್ಕು ತಿಂಗಳ ವಯಸ್ಸಿನಲ್ಲೇ ಈ ಬಾಲ ಕಲಾವಿದೆಯ ಕಲಾತ್ಮಕ ನಿರೂಪಣೆ, ಬಣ್ಣಗಳ ಬಳಕೆ, ಆಕಾರಗಳ ವಿನ್ಯಾಸ ಹಾಸನದ ಕಲಾಶ್ರೀ ಗ್ಯಾಲರಿಯಲ್ಲಿ ನಡೆದ ಕಲಾ ಪ್ರದರ್ಶನದಲ್ಲಿ ಅವಳ 70 ಆಯ್ದ ಕಲಾಕೃತಿಗಳನ್ನು ಸಾರ್ವಜನಿಕ ವೀಕ್ಷಣೆಗೆ ತೆರೆದಿಡಲಾಗಿತ್ತು ಎಂದರು.

ಪ್ರದರ್ಶನಕ್ಕೆ ಬಂದ ಕಲಾ ರಸಿಕರು, ಕಲಾವಿದರು, ಗ್ಯಾಲರಿ ವೀಕ್ಷಕರು ಎಲ್ಲರೂ ಆಕೆಯ ಬಣ್ಣಗಳ ನಿರೂಪಣೆ ಕಂಡು ಮಾರು ಹೋದರು. ಹಾರುವ ಹಕ್ಕಿಗಳು, ಮರಗಳ ಮೃದುವಾದ ರೇಖಾಚಿತ್ರಗಳು, ನೃತ್ಯ ಮಾಡುವಂತೆ ಕಾಣುವ ಆಕೃತಿಗಳು ಇವುಗಳ ದರ್ಶನವೇ ಮಗು ಮನಸ್ಸಿನ ಉಲ್ಲಾಸ, ವಿಮುಕ್ತ ಕಲ್ಪನೆ ಮತ್ತು ನಿರ್ಬಂಧವಿಲ್ಲದ ಅಭಿವ್ಯಕ್ತಿಯ ಪ್ರತಿಬಿಂಬವಾಗಿದೆ ಎಂದು ತಿಳಿಸಿದರು.

ಪುಟ್ಟ ವಯಸ್ಸಿನಲ್ಲೇ ಕಲಾತ್ಮಕತೆಯ ಇಂಥಹ ವೈಭವಮಯ ಹೊರಹೊಮ್ಮುವಿಕೆಯನ್ನು ಪರಿಗಣಿಸಿ ಇಂಡಿಯಾ ಬುಕ್ ಆಫ್ ರೆಕಾರ್ಡ್ ಸಂಸ್ಥೆಯು ಡಿಂಪನಾಳನ್ನು ಐಬಿಆರ್ ಅಚೀವರ್ ಪ್ರಶಸ್ತಿಗೆ ಆಯ್ಕೆ ಮಾಡಿ ಅಧಿಕೃತವಾಗಿ ದಾಖಲಿಸಿದೆ. ಡಿಂಪನಾ ಕಲಾವಿದರ ಕುಟುಂಬದಿಂದ ಬಂದವರಾಗಿದ್ದು, ಮನೆಯ ಕಲಾಮಯ ವಾತಾವರಣವೇ ಆಕೆಯ ಕುತೂಹಲ ಉಜ್ಜೀವನ ಗೊಳಿಸಿದೆ. ದಾಖಲೆ ಮಟ್ಟದ ಸಾಧನೆ ತಂದುಕೊಟ್ಟಿದೆ ಎಂದು ಹೇಳಿದರು. ಶಶಿಕಿರಣ್ ದೇಸಾಯಿ, ಜನಪದ ಕೌದಿ ಕಲಾವಿದೆ ಶಶಿಕಲಾ ಇದ್ದರು.

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಅನುದಾನ ನೀಡಿದ್ದಕ್ಕೆ ಧನ್ಯವಾದ

• ಪ್ರಜೋದಯ ವರದಿ




**ಹಾಸನ:** ಹಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಾರ್ಯಾರಂಭಕ್ಕೆ ಪೂರಕ ಅನುದಾನ ಬಿಡುಗಡೆ ಮಾಡಿರುವ ರಾಜ್ಯ ಸರ್ಕಾರಕ್ಕೆ ಹಿಮ್ಸ್ ಆಡಳಿತ ಪರಿಷತ್ ಸದಸ್ಯ ಬಿ.ಡಿ.ರವೀಶ್ ಅವರು ಧನ್ಯವಾದ ಹೇಳಿದರು.

ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೂಲಕ ನಗರದಲ್ಲೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆಗಬೇಕು. ಹೃದಯಾಘಾತ, ನರರೋಗ, ಕಿಡ್ನಿ ಇತ್ಯಾದಿ ಆರೋಗ್ಯ ಸಮಸ್ಯೆ ಗಳಿಗೆ ಬೇರೆ ಬೇರೆ ಜಿಲ್ಲೆಗಳಿಗೆ ನಗರ ಹಾಗು ಜಿಲ್ಲೆಯ ಜನತೆ ಹೋಗುವುದು ತಪ್ಪಬೇಕೆಂಬ ಬೇಡಿಕೆ ಶೀಘ್ರವೇ ಸಾಕಾರವಾಗುವ ಆಶಾಭಾವ ಮೂಡಿದೆ ಎಂದರು.

ಮೊದಲು ಬಾಕಿ ಕಾಮಗಾರಿ ಮುಗಿಸಲು 8.96 ಕೋಟಿ ರೂ. ಸೇರಿ ಒಟ್ಟಾರೆ 48.92 ಕೋಟಿ ರೂ. ಅನುದಾನವನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ. ಅದಕ್ಕಾಗಿ ಸಿ.ಎಂ. ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಸಂಸದ ಶ್ರೇಯಸ್ ಪಟೇಲ್ ಹಾಗು ಮಾಜಿ ಸಚಿವ ಬಿ. ಶಿವರಾಮ್ ಅವರಿಗೆ ಧನ್ಯವಾದ ಹೇಳಿದರು.

ಮುಂದಿನ ಮೂರ್‍ನಾಲ್ಕು ತಿಂಗಳಲ್ಲಿ ಕಾಮಗಾರಿ ಪೂರ್ಣಗೊಂಡರೆ ಮೊದಲ ಹಂತದಲ್ಲಿ ಕಾರ್ಡಿಯಾಲಜಿ, ನ್ಯೂರಾಲಜಿ, ನ್ಯೂರೋ ಸರ್ಜರಿ, ಯುರಾಲಜಿ ಮತ್ತು ಕಾರ್ಡಿಯಾ ಥೋರಾಸಿಕ್ ಸರ್ಜರಿ ವಿಭಾಗಗಳಿಗೆ ಅಗತ್ಯವಿರುವ ಯಂತ್ರೋಪಕರಣ, ವೈದ್ಯರು ಮತ್ತು ಸಿಬ್ಬಂದಿ ನೇಮಕ ಆದನಂತರ ಕಾರ್ಯಾರಂಭ ಮಾಡಲಿವೆ ಎಂದರು.

ಒಟ್ಟಿನಲ್ಲಿ ನಮ್ಮೆಲ್ಲರ ಬೇಡಿಕೆಗೆ ಸ್ಪಂದಿಸಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಆದಷ್ಟು ಬೇಗ ಜನಸೇವೆಗೆ ದೊರಕಿಸಲು ಸರ್ಕಾರ ಪ್ರಯತ್ನಿಸುತ್ತಿರುವುದು ಶ್ಲಾಘನೀಯ. ಅದರಿಂದ ಜಿಲ್ಲೆ ಸೇರಿ ಹೊರ ಜಿಲ್ಲೆಗಳಿಂದ ನಗರಕ್ಕೆ ಬರುವ ವಿವಿಧ ರೋಗಿಗಳಿಗೆ ಅನುಕೂಲ ಆಗಲಿದೆ ಎಂದು ಹೇಳಿದರು.

ಹೈಟೆಕ್ ಆಸ್ಪತ್ರೆ ಜಿಲ್ಲೆಯಲ್ಲೇ ಕಾರ್ಯಾರಂಭ ಮಾಡಿದರೆ ಎಲ್ಲಾ ರೋಗಗಳಿಗೂ ಇಲ್ಲೇ ಚಿಕಿತ್ಸೆ ದೊರೆಯಲಿದೆ. ಮಾತ್ರವಲ್ಲದೆ ಹೊರ ಜಿಲ್ಲೆಗಳಿಗೆ ಅಲೆಯುವುದರಿಂದ ಆಗುತ್ತಿದ್ದ ಆರ್ಥಿಕ ವೆಚ್ಚ ಕಡಿಮೆಯಾಗಲಿದೆ. ನಗರದ ಹಿಮ್ಸ್ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ, ಪರೀಕ್ಷಾ ಯಂತ್ರಗಳ ಕೊರತೆ ಬಗ್ಗೆ ಸಚಿವರ ಗಮನಕ್ಕೆ ತರಲಾಗಿದ್ದು, ಶೀಘ್ರವೇ ಎಲ್ಲವೂ ಸರಿಹೋಗಲಿದೆ. ವೈದ್ಯರು ನಿಗದಿತ ಸಮಯದವರೆಗೆ ಆಸ್ಪತ್ರೆಯಲ್ಲೇ ಕೆಲಸ ಮಾಡಿದರೆ ಸಮಸ್ಯೆ ಇಲ್ಲವಾಗಲಿದೆ ಎಂದು ಪ್ರಶ್ನೆಗೆ ಉತ್ತರಿಸಿದರು. ಕಾಂಗ್ರೆಸ್ ಮುಖಂಡ ಮಧು ನಾಯಕ, ಗ್ಯಾರಂಟಿ ಸಮಿತಿ ಸದಸ್ಯರಾದ ಅಶೋಕ್, ಮಹೇಶ್ ಇದ್ದರು.

## ಬಿಜೆಪಿಯಿಂದ ನಗರದಲ್ಲಿ ವಿಜಯೋತ್ಸವ



• ಪ್ರಜೋದಯ ವರದಿ

**ಹಾಸನ:** ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಭರ್ಜರಿ ಗೆಲುವು ಸಾಧಿಸಿದ ಹಿನ್ನಲೆ ಶುಕ್ರವಾರ ನಗರದಲ್ಲಿ ಬಿಜೆಪಿ ಕಾರ್ಯಕರ್ತರು, ಮುಖಂಡರು ವಿಜಯೋತ್ಸವ ಆಚರಿಸಿದರು. ಜಿಲ್ಲಾ ಬಿಜೆಪಿ ಕಚೇರಿ ಎದುರು ಜಮಾವಣೆಗೊಂಡ ಪಕ್ಷದ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಅವರು ಮಾತನಾಡಿ, ಎನ್‌ಡಿಎ ಬಿಹಾರದ ಮತದಾರರ ಪ್ರೀತಿ ಗಳಿಸಿ ಗೆಲುವು ಸಾಧಿಸಿದೆ. ಮುಂಬರುವ ಎಲ್ಲಾ ಚುನಾವಣೆಯಲ್ಲಿ ಎನ್‌ಡಿಎ ನೇತೃತ್ವದ ಬಿಜೆಪಿ ಗೆಲುವು ಸಾಧಿಸಲಿದೆ. ನರೇಂದ್ರ ಮೋದಿ ನಾಯಕತ್ವದಲ್ಲಿ ಮುಂದಿನ ದಿನಗಳಲ್ಲಿ ಇನ್ನು ಹಲವು ಕಡೆಗಳಲ್ಲಿ ಅಧಿಕಾರ ಹಿಡಿಯುತ್ತೇವೆ. ಕಾಂಗ್ರೆಸ್ ಹೀನಾಯ ಸೋಲು ಅನುಭವಿಸಿದೆ ಎಂದರು.

**ಭಾರತ ಯಾವ ದಿಕ್ಕಿನಲ್ಲಿ ಸಾಗುತ್ತದೆ ಎಂಬುದಕ್ಕೆ ಬಿಹಾರ ಚುನಾವಣಾ ಫಲಿತಾಂಶ ದಿಕ್ಸೂಚಿ ಯಾಗಿತ್ತು. ಅತಿಯಾದ ಜಾತಿ ಮತ್ತು ಮತೀಯ ಒಲೈಕೆ ರಾಜಕೀಯಕ್ಕೆ ಸರಿಯಾದ ಕ್ರಮವಲ್ಲ. ಅದಕ್ಕೆ ಬಿಹಾರದ ಮತದಾರರು ಸರಿಯಾದ ಉತ್ತರ ನೀಡಿದ್ದಾರೆ. ದೇಶದ ಭದ್ರತೆಗೆ ಮತ ನೀಡಿ ದ್ದಾರೆ. ಈ ಗೆಲುವಿನ ರುವಾರಿಗಳಾದ ಪ್ರಧಾನಿ ಮೋದಿ, ಅಮಿತ್ ಶಾ, ಜೆ.ಪಿ.ನಡ್ಡಾ ಅವರಿಗೆ ಅಭಿನಂದನೆಗಳು.**

**-ಹೆಚ್.ಎಂ.ವಿಶ್ವನಾಥ್,** ಮಾಜಿ ಶಾಸಕ

# 7 ಕೋಟಿ ರೂ. ವೆಚ್ಚದಲ್ಲಿ ಅಂಧ ಮಕ್ಕಳ ಶಾಲೆಗೆ ಹೊಸ ಕಟ್ಟಡ

• ಪ್ರಜೋದಯ ವರದಿ

**ಹಾಸನ:** ನಗರದ ಎಂ.ಕೃಷ್ಣ ಅಂಧ ಮಕ್ಕಳ ಶಾಲೆ ನೂತನ ಕಟ್ಟಡಕ್ಕೆ 7 ಕೋಟಿ ರೂ. ಅನು ದಾನ ಬಿಡುಗಡೆಯಾಗಿದ್ದು, ಡಿ.6 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೂಮಿಪೂಜೆ ನೆರವೇರಿಸಲಿದ್ದಾರೆಂದು ಶಾಲೆಯ ಆಡಳಿತ ಮಂಡಳಿ ಅಧ್ಯಕ್ಷ ಬಿ.ಕೆ. ಮಂಜುನಾಥ್ ಅವರು ಹೇಳಿದರು.

ಶಾಲೆಯಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಮಕ್ಕಳ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತ ನಾಡಿ, ಕಟ್ಟಡ ಚಿಕ್ಕದಾಗಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗುತ್ತಿದೆ. ಈ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದ ಹಿನ್ನಲೆಯಲ್ಲಿ ಹೊಸ ಕಟ್ಟಡಕ್ಕೆ ಅನುದಾನ ದೊರೆತಿದೆಯೆಂದರು.

ಹೊಸ ಕಟ್ಟಡದಲ್ಲಿ ಬೋಧನಾ ಕೊಠಡಿ, ಗ್ರಂಥಾಲಯ, ವಸತಿ ವ್ಯವಸ್ಥೆ ಜೊತೆಗೆ ಅಂಧರ ವೃದ್ಧಾಶ್ರಮ ತೆರೆಯಲಾಗುವುದು. ಶಾಲೆಯಲ್ಲಿ ಈ ವರ್ಷದಿಂದ ವಾರ್ಷಿಕೋತ್ಸವ ಆರಂಭಿಸ ಲಾಗುವುದೆಂದರು.

ನ.14 ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ ಜನ್ಮ ದಿನವಾಗಿದೆ. ಈ ದಿನವನ್ನು ದೇಶಾದ್ಯಂತ ಮಕ್ಕಳ ದಿನವಾಗಿ ಆಚರಿಸಲಾಗುತ್ತದೆ. ಎಲ್ಲಾ ಮಕ್ಕಳು ಸಮಾನರು ಮತ್ತು ಪ್ರೀತಿ ಪಾತ್ರರು ಎಂಬ ಸಂದೇಶ ಸಾರುವುದು ನೆಹರು ಅವರ ಉದ್ದೇಶವಾಗಿತ್ತು. ವಿದ್ಯಾರ್ಥಿಗಳು ತಾವು ಕುರುಡರು ಎಂಬ ಕೀಳರಿಮೆಯಿಂದ ಹೊರಬಂದು ವಿದ್ಯಾಭ್ಯಾಸದ ಮೂಲಕ ಉನ್ನತಿ ಸಾಧಿಸಬೇಕು. ಆ ಮೂಲಕ ಹೆತ್ತವರು ಹಾಗು ಕಲಿತ ಶಾಲೆಗೆ ಕೀರ್ತಿ ತರಬೇಕೆಂದು ಸಲಹೆ ನೀಡಿದರು.

ಶಾಲೆ ಆಡಳಿತ ಮಂಡಳಿ ಕಾರ್ಯದರ್ಶಿ ತಮ್ಮಯ್ಯ ಅವರು ಮಾತನಾಡಿ, ಹಿಂದಿನ ದಿನಗಳಲ್ಲಿ ಅಂಧರ ವಿದ್ಯಾಭ್ಯಾಸಕ್ಕೆ ಸೂಕ್ತ ವ್ಯವಸ್ಥೆ ಮತ್ತು ಪ್ರೋತ್ಸಾಹ ಇರಲಿಲ್ಲ. ಈಗ ಸರ್ಕಾರ ಹಾಗು ಸಂಘ-ಸಂಸ್ಥೆಗಳಿಂದ ಹೆಚ್ಚು ನೆರವು ಸಿಗುತ್ತಿದೆ. ಈ ಸೌಲಭ್ಯಗಳನ್ನು ಬಳಸಿಕೊಂಡು ಅಂಧ ಮಕ್ಕಳು ಶಿಕ್ಷಣ ಪಡೆದು ಉನ್ನತ ಹುದ್ದೆ ಪಡೆಯಬೇಕೆಂದರು.

ಹೋರಾಟಗಾರ ಬಾಳ್ಳುಗೋಪಾಲ್ ಅವರು ಮಾತನಾಡಿ, ಅಂಧ ಮಕ್ಕಳು ತಮ್ಮ ವಿಕಲತೆ ಯನ್ನೇ ಸವಾಲಾಗಿ ಸ್ವೀಕರಿಸಿ ಶ್ರದ್ಧೆಯಿಂದ ಓದಿ ಅಂದುಕೊಂಡಿದ್ದನ್ನು ಸಾಧಿಸಬೇಕೆಂದರು. ಜಿಲ್ಲಾ ಪತ್ರಕರ್ತರ ಸಂಘದ ಉಪಾಧ್ಯಕ್ಷ ಎನ್. ನಂಜುಂಡೇಗೌಡ ಇತರರು ಇದ್ದರು.




## ಶೀಘ್ರ ಡ್ರೋನ್ ಟ್ಯಾಕ್ಸಿ ಸೇವೆ: ಬಾಹ್ಯಾಕಾಶ ನಗರ

• ಪ್ರಜೋದಯ ವರದಿ

**ವಿಶಾಖಪಟ್ಟಣ:** ಆಂಧ್ರಪ್ರದೇಶದಲ್ಲಿ ಡ್ರೋನ್ ಟ್ಯಾಕ್ಸಿ ಸೇವೆ ಆರಂಭಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಡ್ರೋನ್ ಮತ್ತು ಬಾಹ್ಯಾಕಾಶ ನಗರ ನಿರ್ಮಾಣಕ್ಕಾಗಿ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಮತ್ತು ಕೇಂದ್ರ ಸಚಿವ ಪಿಯೂಷ್ ಗೋಯಲ್ ಅವರು ಶುಕ್ರವಾರ ವರ್ಚುವಲ್ ಮೂಲಕ ಶಂಕುಸ್ಥಾಪನೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನಾಯ್ಡು, ರಾಜ್ಯವು ಡ್ರೋನ್ ವಲಯವನ್ನು ಅಭಿವೃದ್ಧಿಗೊಳಿಸುವ ಉದ್ದೇಶ ಹೊಂದಿದೆ. ಈ ನಿಟ್ಟಿನಲ್ಲಿ ಶೀಘ್ರವೇ ಡ್ರೋನ್ ಟ್ಯಾಕ್ಸಿ ಸೇವೆಯನ್ನು ಪರಿಚಯಿಸಲಾಗುವುದು. ಅದಕ್ಕಾಗಿ ಡ್ರೋನ್ ಟ್ರಾಫಿಕ್ ನಿಯಂತ್ರಣ ವ್ಯವಸ್ಥೆಯನ್ನು ಸ್ಥಾಪಿಸಲಾಗುವುದೆಂದು ತಿಳಿಸಿದರು.

## ಮಠ ಮಾನ್ಯಗಳ ಬೆಳವಣಿಗೆಗೆ ಎಲ್ಲರ ಸಹಕಾರ ಅವಶ್ಯ



**ಹಾಸನ:** ಆರೋಗ್ಯಕರ ಸಮಾಜ ನಿರ್ಮಿಸುವಲ್ಲಿ ಮಹತ್ವದ ಪಾತ್ರ ವಹಿಸುವ ಮಠ ಮಾನ್ಯಗಳ ಬೆಳವಣಿಗೆಗೆ ಸಾರ್ವಜನಿಕರು ಸಹಕಾರ ನೀಡಬೇಕೆಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ನಗರದ ಜವೇನಹಳ್ಳಿ ಮಠದ ಮಠಾಧೀಶ ಶ್ರೀ ಸಂಗಮೇಶ್ವರ ಸ್ವಾಮೀಜಿ ಅವರ 60ನೇ ಜನ್ಮ ದಿನಾಚರಣೆ, ಮಠದ ಹಿರಿಯ ಶ್ರೀಗಳ ತ್ರಿಮೂರ್ತಿ ಗದ್ದುಗೆ ನಿರ್ಮಾಣ ಕಟ್ಟಡದ ಶಂಕು ಸ್ಥಾಪನೆ ನೆರವೇರಿಸಿ ಆಶೀರ್ವಚನ ನೀಡಿದರು.

ಜವೇನಹಳ್ಳಿ ಮಠದಲ್ಲಿ ನೂತನ ದೇವಸ್ಥಾನ ಹಾಗು ಗದ್ದುಗೆ ನಿರ್ಮಾಣ ಮಾಡುತ್ತಿರುವುದು ಉತ್ತಮ ಕೆಲಸ. ಮಠದ ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡುವುದು ಎಲ್ಲರ ಜವಾಬ್ದಾರಿಯೆಂದರು.

ಶ್ರೀ ಸಂಗಮೇಶ್ವರ ಸ್ವಾಮೀಜಿ ಮಾತನಾಡಿ, 700 ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಮಠಕ್ಕೆ ಕಾಯಕಲ್ಪ ನೀಡಲಾಗುತ್ತಿದೆ. 6 ಕೋಟಿ ರೂ. ವೆಚ್ಚದ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಮಾಜಿ ಶಾಸಕ ದಿ|| ಹೆಚ್.ಎಸ್.ಪ್ರಕಾಶ್ ಅವರ ತಂದೆ ಸಣ್ಣಯ್ಯ ಅವರು ದೇಗುಲಕ್ಕೆ ನೆರವಾಗಿ ದ್ದರು. ಈಗ ಅವರ ಮೊಮ್ಮಗ ಶಾಸಕ ಹೆಚ್.ಪಿ.ಸ್ವರೂಪ್ ಅವರಿಗೆ ನೆರವಾಗುವಂತೆ ಮನವಿ ಮಾಡಲಾಗಿದೆಯೆಂದರು.

ಹುಬ್ಬಳ್ಳಿ ರಾಯನಾಳು ಮಠದ ಅಭಿನವ ರೇವಣ್ಣ ಸಿದ್ದೇಶ್ವರ ಸ್ವಾಮೀಜಿ, ತಣ್ಣೀರುಹಳ್ಳ ಮಠದ ಶ್ರೀ ವಿಜಯ ಕುಮಾರ ಸ್ವಾಮೀಜಿ, ಸೀಗೆ ಗುಡ್ಡದ ನಂದೀಶ್ವರ ಸ್ವಾಮೀಜಿ, ಬಸವಲಿಂಗ ಶ್ರೀ, ಪತ್ರಕರ್ತ ರವಿ ನಾಕಲಗೂಡು, ಬಿ.ವಿ.ಉಮೇಶ್, ಪರಮಶಿವಯ್ಯ, ಕಟ್ಟಾಯ ಶಿವಕುಮಾರ್ ಇತರರಿದ್ದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK